ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 154 RNI Number : KNKAN/25/A2770 12-06-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :154 ರಾಯಚೂರು 12-06-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ರಾಜ್ಯ ಆಡಳಿತದ ಕಾರ್ಯಕ್ಷಮತೆಗೆ ಒತ್ತು: ಸಿಎಂ ಡಿಕೆಶಿ

ಬೆಂಗಳೂರು,ಜೂ.11–

ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಬಳಿಕ ರಾಜ್ಯದ ಜಿಲ್ಲಾಡಳಿತದೊಂದಿಗೆ ನಡೆಸುತ್ತಿರುವ ಮೊದಲ ಮಹತ್ವದ ಸಮಾಲೋಚನಾ ಸಭೆ ಜೂನ್ 13ರಂದು ವಿಧಾನಸೌಧದಲ್ಲಿ ನಡೆಯಲಿದೆ.



ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು (ಡಿಸಿ) ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ (ಸಿಇಒ) ಜೊತೆ ಪರಿಶೀಲನಾ ಸಭೆ ನಡೆಸಲು ಮುಖ್ಯಮಂತ್ರಿ ನಿರ್ಧರಿಸಿದ್ದಾರೆ.

ಮಳೆಗಾಲ ಆರಂಭವಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿನ ಸಿದ್ಧತೆ, ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಸರ್ಕಾರದ ಪ್ರಮುಖ ಯೋಜನೆಗಳ ಅನುಷ್ಠಾನ ಹಾಗೂ ಜಿಲ್ಲಾಮಟ್ಟದಲ್ಲಿ ಆಡಳಿತಾತ್ಮಕ ಸಮನ್ವಯ ಕುರಿತು ಸಭೆಯಲ್ಲಿ ಪರಿಶೀಲನೆ ನಡೆಸಲಿದ್ದಾರೆಂದು ಮೂಲಗಳು ತಿಳಿಸಿವೆ.

ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನ, ಮೂಲ ಸೌಕರ್ಯ ಕಾಮಗಾರಿಗಳ ವೇಗ, ಅನುದಾನ ಬಳಕೆ ಹಾಗೂ ಜನಪರ ಯೋಜನೆಗಳ ಪರಿಣಾಮಕಾರಿ ಜಾರಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸ್ಪಷ್ಟ ನಿರ್ದೇಶನ ನೀಡುವ ಸಾಧ್ಯತೆ ಇದೆ.

ಸಭೆಯಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯಿತಿ ಸಿಇಒಗಳು ಹಾಗೂ ಹಿರಿಯ ಅಧಿಕಾರಿಗಳ ಭಾಗವಹಿಸಲಿದ್ದು, ಆಡಳಿತದಲ್ಲಿ ಸಮಗ್ರ ಸಮನ್ವಯಕ್ಕೆ ಒತ್ತು ನೀಡುವ ಪ್ರಯತ್ನ ನಡೆಯಲಿದೆ ಎಂದು ತಿಳಿದುಬಂದಿದೆ.

ಇತ್ತೀಚೆಗೆ ಆಡಳಿತಾತ್ಮಕ ಮಟ್ಟದಲ್ಲಿ ಹಲವು ಮಹತ್ವದ ಬದಲಾವಣೆಗಳನ್ನು ಕೈಗೊಂಡಿರುವ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಆಡಳಿತದ ವೇಗ ಹೆಚ್ಚಿಸಲು ಒತ್ತು ನೀಡುತ್ತಿದ್ದಾರೆ.

ಗುಪ್ತಚರ ವಿಭಾಗದ ಮುಖ್ಯಸ್ಥರ ನೇಮಕ ಸೇರಿದಂತೆ ಹಲವು ಪ್ರಮುಖ ಹುದ್ದೆಗಳಲ್ಲಿ ಬದಲಾವಣೆಗಳನ್ನು ಮಾಡಿರುವ ಸರ್ಕಾರ, ಅಭಿವೃದ್ಧಿ ಕಾರ್ಯಗಳ ಅನುಷ್ಠಾನಕ್ಕೆ ಹೊಸ ಚೈತನ್ಯ ನೀಡಲು ಮುಂದಾಗಿದೆ ಎಂದು ರಾಜಕೀಯ ವಿಶ್ಲೇಷಕ

4 ನೇ ಪುಟಕ್ಕೆ...

ಎಥೆನಾಲ್ ಮಿಶ್ರಿತ ಪೆಟ್ರೋಲ್‌ಗೆ ಅಬಕಾರಿ ಸುಂಕದಿಂದ ವಿನಾಯಿತಿ ನೀಡಿದ ಕೇಂದ್ರ ಸರ್ಕಾರ

ನವದೆಹಲಿ,ಜೂ.11–

: ಮೋದಿ ಸರ್ಕಾರವು ಎಥೆನಾಲ್ ಮಿಶ್ರಿತ ಪೆಟ್ರೋಲ್ ಅನ್ನು ಉತ್ತೇಜಿಸುವ ನಿಟ್ಟನಲ್ಲಿ ಮಹತ್ವದ ಹೆಜ್ಜೆ ಇಟ್ಟಿದೆ. 22% ರಿಂದ 30% ಎಥೆನಾಲ್ (22, 25, 27, ಮತ್ತು 30) ಹೊಂದಿರುವ ಪೆಟ್ರೋಲ್ ಮಿಶ್ರಣಗಳನ್ನು ಅಬಕಾರಿ ಸುಂಕದಿಂದ ವಿನಾಯಿತಿ ನೀಡಲು ಸರ್ಕಾರ ನಿರ್ಧರಿಸಿದೆ. ಈ ಕ್ರಮವು ದೇಶದಲ್ಲಿ ಹೆಚ್ಚಿನ ಎಥೆನಾಲ್ ಮಿಶ್ರಿತ ಇಂಧನಗಳ ಬಳಕೆಯನ್ನು ಹೆಚ್ಚಿಸುವ ನಿರೀಕ್ಷೆಯಿದೆ. ಆಮದು ಮಾಡಿಕೊಂಡ ಕಚ್ಚಾ ತೈಲದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಮತ್ತು ಜೈವಿಕ



ಇಂಧನಗಳ ಬಳಕೆಯನ್ನು ಹೆಚ್ಚಿಸಲು ಭಾರತವು ಕಾರ್ಯತಂತ್ರವನ್ನು ಸಕ್ರಿಯವಾಗಿ ಅನುಸರಿಸುತ್ತಿರುವ ಸಮಯದಲ್ಲಿ ಈ ನಿರ್ಧಾರ ಬಂದಿದೆ.

4 ನೇ ಪುಟಕ್ಕೆ...

ಅದಿತಿ ಆಸ್ಪತ್ರೆ ವಿರುದ್ಧ ಗಂಭೀರ ಆರೋಪ: ಮೋಸ, ನಿಯಮ ಉಲ್ಲಂಘನೆ ಕುರಿತು ಸಮಗ್ರ ತನಿಖೆಗೆ ಆಗ್ರಹ

ರಾಯಚೂರು,ಜೂ.11–

ನಗರದ ಆಶಾಪೂರ್ ರಸ್ತೆಯಲ್ಲಿರುವ ಅದಿತಿ ಆಸ್ಪತ್ರೆ, ರೋಗಿಗಳಿಗೆ ಮೋಸ ಮಾಡಿ ಅನಗತ್ಯವಾಗಿ ಹಣ ವಸೂಲಿ ಮಾಡುತ್ತಿರುವುದಲ್ಲದೆ, ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯಿದೆಯ ಅನ್ವಯ ಹಲವು ನಿಯಮುಗಳನ್ನು ಉಲ್ಲಂಘಿಸಿದೆ ಎಂದು ಆರೋಪಿಸಿ ಆಸ್ಪತ್ರೆಯ ವಿರುದ್ಧ ಸಮಗ್ರ ತನಿಖೆ ನಡೆಸಿ ಕಾನೂನು ಕ್ರಮ ಜರುಗಿಸಬೇಕೆಂದು ಸಾಮಾಜಿಕ ಹೋರಾಟಗಾರ ಶಾಲಾಂಪಾಶ ಹಾಗೂ ಉಮೇಶ್ ಅವರು ಆಗ್ರಹಿಸಿದರು.



ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಂಬಂಧ ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಹಲವು ಬಾರಿ ಲಿಖಿತ ದೂರುಗಳನ್ನು ಸಲ್ಲಿಸಿದರೂ ಇದುವರೆಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸ್ಥಳೀಯ ಮಟ್ಟದಲ್ಲಿ ಕ್ರಮವಾಗದ ಹಿನ್ನೆಲೆಯಲ್ಲಿ ಮೇಲಾಧಿಕಾರಿಗಳಿಗೆ ದೂರು ಸಲ್ಲಿಸಿ ನ್ಯಾಯಕ್ಕಾಗಿ ಹೋರಾಟ ಮುಂದುವರಿಸಲಾಗುವುದು ಎಂದು ತಿಳಿಸಿದರು.

ಮಾತನಾಡಿದ ಶಾಲಾಂಪಾಶ ಅವರು, ''2025ರಲ್ಲಿ ನನ್ನ ಪತ್ನಿಯನ್ನು ಚಿಕಿತ್ಸೆಗೆಂದು ಅದಿತಿ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದೆ. ಅಲ್ಲಿ ವೈದ್ಯರು ವಿವಿಧ ರಕ್ತ ಪರೀಕ್ಷೆಗಳು, ಸ್ಕ್ಯಾನಿಂಗ್ ಸೇರಿದಂತೆ ಹಲವಾರು ಪರೀಕ್ಷೆಗಳನ್ನು ಮಾಡಿಸಬೇಕೆಂದು ಸೂಚಿಸಿದರು. ವೈದ್ಯರ ಸಲಹೆಯಂತೆ ಎಲ್ಲ ಪರೀಕ್ಷೆಗಳನ್ನು ಮಾಡಿಸಿದ್ದರೂ, ನೀಡಲಾದ ವರದಿಗಳಲ್ಲಿ ವೈದ್ಯರ ಸಹಿ ಇರಲಿಲ್ಲ. ಜೊತೆಗೆ ಕೆಲವು ವರದಿಗಳು ತಪ್ಪಾಗಿದ್ದವು ಎಂಬುದು ನಂತರ ತಿಳಿದುಬಂದಿತು. ಈ ಕುರಿತು ಹಿರಿಯ ಆರೋಗ್ಯ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದೇನೆ. ಇದೇ ರೀತಿಯಲ್ಲಿ ಅನೇಕ ರೋಗಿಗಳು ಆಸ್ಪತ್ರೆಯಿಂದ ಮೋಸ ಹೋಗಿರುವ ಸಾಧ್ಯತೆಗಳಿವೆ. ಆದ್ದರಿಂದ ಆಸ್ಪತ್ರೆಯ ಕಾರ್ಯವೈಖರಿಯನ್ನು ಸಂಪೂರ್ಣವಾಗಿ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು'' ಎಂದು ಒತ್ತಾಯಿಸಿದರು.

ನಂತರ ಮಾತನಾಡಿದ ಉಮೇಶ್ ಅವರು, ''ನಮ್ಮ ಕುಟುಂಬಕ್ಕೆ ಸಂತಾನೋತ್ಪತ್ತಿ ಸಮಸ್ಯೆ ಇದ್ದ ಕಾರಣ, ಆಸ್ಪತ್ರೆಯವರು ಐವಿಎಫ್ () ಚಿಕಿತ್ಸೆ ನೀಡಲಾಗುತ್ತದೆ ಎಂದು ತಿಳಿಸಿದ್ದರಿಂದ ನನ್ನ ಪತ್ನಿಯನ್ನು ಚಿಕಿತ್ಸೆಗಾಗಿ ಅಲ್ಲಿಗೆ ದಾಖಲಿಸಿದ್ದೆ. ಕಳೆದ ನಾಲ್ಕೈದು ವರ್ಷಗಳಲ್ಲಿ ಸುಮಾರು ಎರಡೂವರೆ ಲಕ್ಷದಿಂದ ಮೂರು ಲಕ್ಷ ರೂಪಾಯಿವರೆಗೆ ಹಣ ಪಾವತಿಸಿದ್ದೇನೆ. ಆದರೆ ಸೂಕ್ತ ಚಿಕಿತ್ಸೆ ನೀಡದೆ, ಐವಿಎಫ್ ಚಿಕಿತ್ಸೆಯ ಹೆಸರಿನಲ್ಲಿ ಮೋಸ

4 ನೇ ಪುಟಕ್ಕೆ...

ರಾಯಚೂರ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆಯಿಂದ ಖೇತ್ ಬಚಾವೋ ಅಭಿಯಾನ



ಮಾನ್ವಿ,ಜೂ.11–


ರಾಯಚೂರು ಕೃಷಿ ವಿಜ್ಞಾನ ಕೇಂದ್ರ ಮತ್ತು ಕಲ್ಲೂರು ಹಾಗೂ ಕುರ್ಡಿ ರೈತ ಸಂಪರ್ಕ ಕೇಂದ್ರದ ವತಿಯಿಂದ ನಡೆದ ಖೇತ್ ಬಚಾವೋ ಅಭಿಯಾನಕ್ಕೆ ರಾಯಚೂರ ಕೃಷಿ ವಿಜ್ಞಾನ ಕೇಂದ್ರದ ಕೃಷಿ ವಿಜ್ಞಾನಿ ಹಾಗೂ ಬೇಸಾಯಶಾಸ್ತ ವಿಜ್ಞಾನಿ ಡಾ.ಮಲ್ಲರೆಡ್ಡಿ ಚಾಲನೆ ನೀಡಿ ಮಾತನಾಡಿ ಮಣ್ಣು ಆರೋಗ್ಯವಾಗಿದ್ದಾಗ ಮಾತ್ರ . ಬೆಳೆ ಉತ್ಪಾದ'ಕತೆ ಹೆಚ್ಚಿಸುವುದಕ್ಕೆ ಸಾಧ್ಯ ಸಸ್ಯಗಳ ಬೆಳೆವಣಿಗೆಗೆ 17 ಪೋಷಕಾಂಶಗಳು ಅಗತ್ಯವಿರುತ್ತದೆ ಆದ್ದರೆ ರೈತರು ಕೇವಲ ಅಗತ್ಯ ಪೋಷಕಾಂಶಗಳನ್ನು ಹೆಚ್ಚಾಗಿ ರಾಸಾಯನಿಕ ಗೊಬ್ಬರ ಮೂಲಕ ನೀಡುವುದರಿಂದ ಬೆಳೆಗೆ ಸಮಗ್ರ ಪೋಷಕಾಂಶಗಳು ದೊರೆಯದೆ ಉತ್ಪಾದಕತೆ ಕಡಿಮೆಯಾಗುವುದಲ್ಲದೆ ಮಣ್ಣಿನ ಭೌತಿಕ,ರಾಸಾಯನಿಕ ಮತ್ತು ಜೈವಿಕ ಗುಣಮಟ್ಟ ಇಳಿಮುಖವಾಗಿ. ಮಣ್ಣಿನ ಆರೋಗ್ಯ , ಫಲವತ್ತತೆ ಕೆಡುತ್ತದೆ.ಆದ್ದರಿಂದ ರೈತರು ಸಮಗ್ರ ಪೋಷಕಾಂಶಗಳ ನಿರ್ವಹಣೆಗೆ ಭೂಮಿಗೆ ತಿಪ್ಪೆ ಗೊಬ್ಬರ, ಹಸಿರೆಲೆ ಗೊಬ್ಬರಗಳು, ದ್ರವಯುಕ್ತ ಸಾವಯುವ ಗೊಬ್ಬರಗಳಾದ ಜೀವಾಮೃತ, ಪಂಚಗವ್ಯ,ಎರೆಜಲ, ರೈಜೋ ಬಿಯಂ, ರಂಜಕ ಕರಗಿಸುವ ಸೂಕ್ಷ್ಮಾಣು ಜೀವಿಗಳಿಂದ ತಯಾರಿಸಿದ ಜೈವಿಕ ಗೊಬ್ಬರಗಳು, ಬೆಳೆ

4 ನೇ ಪುಟಕ್ಕೆ...

ರೈತರ ಹಿತ ಕಾಯಲು ಸರಕಾರ ಮುಂದಾಗಬೇಕು: ಡಾ. ಬಾಬುರಾವ್

ರಾಯಚೂರು, ಜೂ.11–

ಮುಂಗಾರು ಆರಂಭಗೊಂಡಿದ್ದು, ಜಿಲ್ಲೆಯಲ್ಲಿ ಮಳೆಯ ಪ್ರಮಾಣ ಹೆಚ್ಚಾಗುತ್ತಿರುವ ಹಿನ್ನೆಲೆ ರೈತರಲ್ಲಿ ಆಶಾಭಾವನೆ ಮೂಡಿದೆ. ಈ ಸಂದರ್ಭದಲ್ಲಿ ರೈತರಿಗೆ ಅಗತ್ಯವಿರುವ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳನ್ನು ಸಮರ್ಪಕವಾಗಿ ಪೂರೈಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಎಪಿಎಂಸಿ ಮಾಜಿ ಉಪಾಧ್ಯಕ್ಷ ಡಾ. ಬಾಬುರಾವ್ ಆಗ್ರಹಿಸಿದ್ದಾರೆ.



ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಿಲ್ಲೆಯ ರೈತರು ಬಿತ್ತನೆ ಕಾರ್ಯಕ್ಕೆ ಸಿದ್ಧತೆ ನಡೆಸುತ್ತಿರುವ ಸಂದರ್ಭದಲ್ಲಿ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರಗಳು ಅಗತ್ಯ ಪ್ರಮಾಣದಲ್ಲಿ ಲಭ್ಯವಾಗುತ್ತಿಲ್ಲ ಎಂದು ತಿಳಿಸಿದ್ದಾರೆ. ಕೆಲ ಮಾರಾಟಗಾರರು ಬೀಜ ಮತ್ತು ಗೊಬ್ಬರವನ್ನು ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿಸಿ, ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ ಎಂದು ಆರೋಪಿಸಿದ್ದಾರೆ.

ಆದ್ದರಿಂದ ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ರೈತರಿಗೆ ಅಗತ್ಯಕ್ಕೆ ಅನುಗುಣವಾಗಿ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರಗಳನ್ನು ಎಂಆರ್‌ಪಿ ದರದಲ್ಲಿ ಸಮರ್ಪಕವಾಗಿ ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ವೇಳೆ ಕೃಷಿ ಇಲಾಖೆ ಅಧಿಕಾರಿಗಳು ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಳಿಗೆಗಳಲ್ಲಿ ಪರಿಶೀಲನೆ ನಡೆಸಿ, ರೈತರಿಗೆ ಸರಿಯಾದ ಪ್ರಮಾಣದಲ್ಲಿ ಸಾಮಗ್ರಿಗಳು ದೊರೆಯುತ್ತಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದಿದ್ದಾರೆ. ರೈತರಿಗೆ ಅಗತ್ಯವಿರುವ ಗೊಬ್ಬರದ ಜೊತೆಗೆ ಅನಗತ್ಯ ಔಷಧಿ ಅಥವಾ ಇತರೆ ಉತ್ಪನ್ನಗಳನ್ನು ಕಡ್ಡಾಯವಾಗಿ ಖರೀದಿಸಲು ಒತ್ತಾಯಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಅವರು ಆಗ್ರಹಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಮಾನ್ವಿ,ಜೂ.11–

ತಾಲೂಕು ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2026–27ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಅರ್ಹ 1 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದು ಇಲಾಖಾ ವೆಬ್ ಸೈಟ್ https://swd.karnataka.gov.in/kn ನಲ್ಲಿ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ವಿದ್ಯಾರ್ಥಿಯ ಆಧಾರ ಸಂಖ್ಯೆಯು ಬ್ಯಾಂಕ್ ಖಾತೆಗೆ ಜೋಡಣೆಯಾಗಿರಬೇಕು. ಸ್ವಟ್ನಂ, ಕಳೆದ ಸಾಲಿನ

4 ನೇ ಪುಟಕ್ಕೆ...

ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂನ್ 14ರಿಂದ ಉಚಿತ ಯೋಗ ಶಿಬಿರ

ರಾಯಚೂರು,ಜೂ.11–

ನಗರದ ಪತಂಜಲಿ ಯೋಗ ಸಮಿತಿ ಹಾಗೂ ಲಕ್ಷ್ಮೀ ವೆಂಕಟೇಶ ದೇಸಾಯಿ ಮಹಾವಿದ್ಯಾಲಯದ ಆಶ್ರಯದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂನ್ 14ರಿಂದ ಎಂಟು ದಿನಗಳ ಕಾಲ ಉಚಿತ ಯೋಗ ಮತ್ತು ಪ್ರಾಣಾಯಾಮ ಶಿಬಿರ ಆಯೋಜಿಸಲಾಗಿದೆ ಎಂದು ಪತಂಜಲಿ ಯೋಗ ಸಮಿತಿಯ ಜಿಲ್ಲಾ ಘಟಕದ ಅಧ್ಯಕ್ಷ ವಿಠೋಬ ರಾವ್ ತಿಳಿಸಿದ್ದಾರೆ.

ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿದಿನ ಬೆಳಿಗ್ಗೆ 5.30 ರಿಂದ 7.30 ಗಂಟೆಯವರೆಗೆ ನಗರದ ಎಲ್.ವಿ.ಡಿ ಕಾಲೇಜು ಮೈದಾನ



ದಲ್ಲಿ ಶಿಬಿರ ನಡೆಯಲಿದೆ ಎಂದು ಹೇಳಿದರು.

ಯೋಗಾಭ್ಯಾಸವು ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಪರಿಣಾಮಕಾರಿ ಸಾಧನವಾಗಿದ್ದು, ವಿಶೇಷವಾಗಿ ವಿದ್ಯಾರ್ಥಿಗಳು ಮತ್ತು ಯುವ ಜನರು ತಮ್ಮ ದೈನಂದಿನ ಬದುಕಿನಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ನಿಯಮಿತ ಯೋಗಾಭ್ಯಾಸದಿಂದ ಏಕಾಗ್ರತೆ, ನೆನಪಿನ ಶಕ್ತಿ ಹಾಗೂ ಮಾನಸಿಕ ಸಮತೋಲನ ವೃದ್ಧಿಯಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಯುವಜನರಲ್ಲಿ ಹೆಚ್ಚುತ್ತಿರುವ ಆರೋಗ್ಯ ಸಮಸ್ಯೆಗಳ ಹಿನ್ನೆಲೆ ಆರೋಗ್ಯಕರ ಜೀವನಶೈಲಿಗೆ ಯೋಗ ಮಹತ್ವ ಪಡೆದಿದೆ ಎಂದು ತಿಳಿಸಿದರು.

ಮಧುಮೇಹ, ರಕ್ತದೊತ್ತಡ, ಥೈರಾಯ್ಡ್ ಸಮಸ್ಯೆ, ಅಸ್ತಮಾ, ಗ್ಯಾಸ್ಟ್ರಿಕ್, ಬೆನ್ನುನೋವು, ಮಂಡಿನೋವು, ಮಲಬದ್ಧತೆ, ಬೊಜ್ಜು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳ ನಿರ್ವಹಣೆಗೆ ಯೋಗ ಸಹಕಾರಿಯಾಗಬಹುದು ಎಂದು ಅವರು ಅಭಿಪ್ರಾಯಪಟ್ಟರು. ಜೊತೆಗೆ ರೋಗನಿರೋಧಕ ಶಕ್ತಿ ವೃದ್ಧಿ

4 ನೇ ಪುಟಕ್ಕೆ...

ಉಜ್ವಲಾ ಯೋಜನೆ ಸಿಲಿಂಡರ್ ಗ್ಯಾಸ್ 9ರಿಂದ 4ಕ್ಕೆ ಇಳಿಕೆ: ಪೂಜಾರ ಖಂಡನೆ

ಸಿಂಧನೂರು,ಜೂ.11–

ಪ್ರಧಾನ ಮಂತ್ರಿ ಉಜ್ವಲಾ ಯೋಜನೆಯ (ಪಿಎಂಯುವೈ) ಫಲಾನುಭವಿಗಳಿಗೆ ಪ್ರತಿವರ್ಷ ನೀಡುತ್ತಿದ್ದ ಸಬ್ಸಿಡಿ ಸಹಿತ ಎಲ್‌ಪಿಜಿ ಸಿಲಿಂಡರ್ ಸಂಖ್ಯೆಯನ್ನು ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರ ನಾಲ್ಕಕ್ಕೆ ಇಳಿಕೆ ಮಾಡಿದ್ದಲ್ಲದೇ ರೂ.29 ಬೆಲೆ ಏರಿಕೆ ಮಾಡಿರುವುದನ್ನು ಸಿಪಿಐ(ಎಂಎಲ್) ಲಿಬರೇಶನ್ ಜಿಲ್ಲಾ ಕಾರ್ಯದರ್ಶಿ ನಾಗರಾಜ ಪೂಜಾರ ಖಂಡಿಸಿದ್ದಾರೆ.



ಈ ಕುರಿತು ಮಂಗಳವಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು ದೇಶದ ಪ್ರಧಾನ ಮಂತ್ರಿ ನರೇಂದ್ರಮೋದಿ ಹೊಗೆಮುಕ್ತ ಮನೆ ಮಾಡುವುದಾಗಿ ಹೇಳಿ, ಉಜ್ವಲಾ ಯೋಜನೆಯಡಿ ಆರಂಭದಲ್ಲಿ ವರ್ಷಕ್ಕೆ 14.2 ಕೆ.ಜಿ ತೂಕದ 12 ಅಡುಗೆ ಅನಿಲ ಗ್ಯಾಸ್‌ಗಳನ್ನು ನಿಗದಿಪಡಿಸಲಾಗಿತ್ತು. ಆದರೆ ಕಳೆದ ವರ್ಷ 9 ಸಿಲಿಂಡರ್‌ಗೆ ಇಳಿಸಲಾಯಿತು. ಆದರೆ ಈಗ ಕೇಂದ್ರ ಸರ್ಕಾರ ದಿಢೀರ್ ಎಂದು 5 ಸಿಲಿಂಡರ್ ಗ್ಯಾಸ್ ಕಡಿತ ಮಾಡಿ ಕೇವಲ 4 ಗ್ಯಾಸ್‌ಗಳನ್ನು ಫಲಾನುಭವಿಗಳಿಗೆ ನೀಡುವುದಾಗಿ

4 ನೇ ಪುಟಕ್ಕೆ...

ಪ್ರಧಾನಿ ನರೇಂದ್ರ ಮೋದಿಜಿಯವರ ದೀರ್ಘವಾದಿ ಆಡಳಿತಕ್ಕಾಗಿ ವಿಶೇಷ ಪೂಜೆ



ಮಾನ್ವಿ,ಜೂ.11–

ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ಭಾರತೀಯ ಜನತಾ ಪಾರ್ಟಿಯ ಮಾನ್ವಿ ಮಂಡಲದ ವತಿಯಿಂದ ಪ್ರಧಾನಿ ನರೇಂದ್ರ ಮೋದಿಜಿ ಯವರು ಅತಿ ಹೆಚ್ಚು ಅವಧಿಗೆ ದೇಶದ ಪ್ರಾಧಾನಿಗಳಾಗಿ ಸೇವೆ ಸಲ್ಲಿಸಿದ ಪ್ರಯುಕ್ತ ವಿಶೇಷ ಪೂಜೆಯನ್ನು ಸಲ್ಲಿಸಿ ಬಿ.ಜೆ.ಪಿ, ಮಾನ್ವಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗಾವತಿ ಮಾತನಾಡಿ ಜೂನ್ 10 ರಂದು 4399 ದಿನಗಳ ಕಾಲ ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿಜಿ ಯವರು ದೀರ್ಘವಾದಿ ಆಡಳಿತ ನೀಡಿರುವುದು ದೇಶದ ಇತಿಹಾಸದಲ್ಲೇ ಒಂದು ಅವಿಸ್ಮರಣೀಯ ಸಂಗತಿಯಾಗಿದೆ ಎಂದು ತಿಳಿಸಿದರು.

ಮಾನ್ವಿ ಮಂಡಲ ಪ್ರಧಾನ ಕಾರ್ಯದರ್ಶಿ ಗುರುಸಿದ್ದಪ್ಪ ಕಣ್ಣೂರು, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷರಾದ ದೊರೆಬಾಬು, ವೀರನಗೌಡ ವಕೀಲರು ಪೋತ್ನಾಳ, ಶಿವಲಿಂಗಯ್ಯ ಸ್ವಾಮಿ, ಜಗದೀಶ ಒತೂರು, ಕುಮಾರಸ್ವಾಮಿ ಮೇದಾ, ಉಮಾಪತಿ ನಾಯಕ, ಚಂದ್ರಶೇಖರ

4 ನೇ ಪುಟಕ್ಕೆ...

ಗೋಮರ್ಸಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಭಿವೃದ್ಧಿಗೆ ಮನವಿ



ಸಿಂಧನೂರು,ಜೂ.11–

ಸಿಂಧನೂರು ತಾಲೂಕಿನ ಮಾಡಸಿರವಾರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ,ಗೋಮರ್ಸಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಅಗತ್ಯತೆಯನ್ನು ಮನಗಂಡು, ಗ್ರಾಮದ ಮುಖಂಡರು, ಶಾಲಾ ಶಿಕ್ಷಕರು ಸಾರ್ವಜನಿಕರು ಇಂದು ಮಾಡಸಿರವಾರ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳಿಗ ಗೋಮರ್ಸಿ ಯಲ್ಲಿ ಮನವಿ ಪತ್ರ ಸಲ್ಲಿಸಿದರು.

ಶಾಲೆಯಲ್ಲಿ ಹೆಚ್ಚುವರಿ ಕೊಠಡಿಗಳ ನಿರ್ಮಾಣ, ಶೌಚಾಲಯಗಳ ದುರಸ್ತಿ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶಾಲಾ ಆವರಣದ ಸ್ವಚ್ಛತೆ, ಆಟದ ಮೈದಾನದ ಅಭಿವೃದ್ಧಿ, ಕಾಂಪೌಂಡ್ ನಿರ್ಮಾಣ ಸೇರಿದಂತೆ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಮನವಿಯಲ್ಲಿ

4 ನೇ ಪುಟಕ್ಕೆ...

ಬಳ್ಳಾರಿ: ಹವಾಮಾನ ಬದಲಾವಣೆ ಕ್ರಿಯಾ ಯೋಜನೆ ಕುರಿತ ತರಬೇತಿ ಕಾರ್ಯಾಗಾರ

ಹವಾಮಾನ ವೈಪರೀತ್ಯ ಜನರ ಜೀವನಕ್ಕೆ ಕಂಟಕ: ಯೋಗೀಶ್ ಶಿವಾಚಾರ್ಯ

ಬಳ್ಳಾರಿ,ಜೂ.10

ನಿರಂತರವಾಗಿ ಬದಲಾಗುತ್ತಿರುವ ಹವಾಮಾನ ವೈಪರೀತ್ಯವು ಜನರ ಜೀವನಕ್ಕೆ ಬಹುದೊಡ್ಡ ಕಂಟಕವಾಗಿ ಪರಿಣಮಿಸಲಿದೆ ಎಂದು ಜಿಲ್ಲಾ ಪಂಚಾಯತ್ ನ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಅವರು ಅಭಿಪ್ರಾಯಪಟ್ಟರು.



ಹವಾಮಾನ ಬದಲಾವಣೆಯ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಮತ್ತು ಸರ್ಕಾರಿ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕಾಗಿ, ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಜಂಟಿ ಸಹಯೋಗದಲ್ಲಿ ನಗರದ ಜಿಪಂ ಹಳೆಯ ಅಬ್ದುಲ್ ನಜೀರ್ ಸಭಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ''ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕುರಿತು ಕ್ರಿಯಾ ಯೋಜನೆ'' ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ರಾಜ್ಯದಲ್ಲೂ ಹವಾಮಾನ ಬದಲಾವಣೆಯ ಪರಿಣಾಮಗಳು ಸ್ಪಷ್ಟವಾಗಿ ಗೋಚರಿಸುತ್ತಿವೆ. ಕೆಲವೆಡೆ ಅತಿವೃಷ್ಟಿ ಉಂಟಾಗುತ್ತಿದ್ದರೆ, ಇನ್ನು ಕೆಲವು ಕಡೆ ಮಳೆಯ ಕೊರತೆಯಿಂದಾಗಿ ಕೃಷಿ ಚಟುವಟಿಕೆಗಳು ತೀವ್ರ ಸಂಕಷ್ಟಕ್ಕೆ ಸಿಲುಕುತ್ತಿವೆ. ಇದು ನೇರವಾಗಿ ರೈತರ ಜೀವನೋಪಾಯ ಹಾಗೂ ಆಹಾರ ಭದ್ರತೆಯ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಹವಾಮಾನ ಬದಲಾವಣೆ ಹೇಗಿದೆ, ಮುಂದಿನ ದಿನಗಳಲ್ಲಿ ಏನನ್ನು ನಿರೀಕ್ಷಿಸಬಹುದು ಮತ್ತು ಯಾವ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂಬುದರ ಕುರಿತು ಈಗಾಗಲೇ ಒಂದು ಸಮಗ್ರ ಕ್ರಿಯಾ ಯೋಜನೆ ಸಿದ್ಧವಾಗಿದೆ. ಹವಮಾನ ಬದಲಾವಣೆಯ ವಲಯವಾರು ನೀತಿಗಳು ಮತ್ತು ಅದರ ಅನುಷ್ಠಾನದ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಜಾಗೃತಿ ಮೂಡಿಸುವುದು ಈ ಕಾರ್ಯಾಗಾರದ ಮುಖ್ಯ ಉದ್ದೇಶವಾಗಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ರೂಪಿಸಿರುವ ಹವಾಮಾನ ಬದಲಾವಣೆ ಕ್ರಿಯಾ ಯೋಜನೆಯ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದ ಅವರು, ಇಂತಹ ಉಪಯುಕ್ತ ತರಬೇತಿಯನ್ನು ಆಯೋಜಿಸಿದ ಎಂಪ್ರಿ ಸಂಸ್ಥೆಯ ಕಾರ್ಯವನ್ನು ಶ್ಲಾಘಿಸಿದರು. ತರಬೇತಿಯಲ್ಲಿ ಭಾಗವಹಿಸಿದ್ದ ಅಧಿಕಾರಿಗಳು ಇದರ ಪೂರ್ಣ ಪ್ರಯೋಜನವನ್ನು ಪಡೆದುಕೊಂಡು ತಮ್ಮ ಇಲಾಖೆಗಳಲ್ಲಿ ಜಾರಿಗೊಳಿಸಬೇಕು ಎಂದು ಕರೆ ನೀಡಿದರು.

ಎಂಪ್ರಿ ಸಂಸ್ಥೆಯ ಸಂಶೋಧನಾ ವಿಜ್ಞಾನಿಗಳಾದ ಡಾ.ಶೃತಿ ಬಿ.ವಿ ಅವರು ಮಾತನಾಡಿ, ಕರ್ನಾಟಕ ಸರ್ಕಾರದ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಅಧೀನದಲ್ಲಿರುವ ಸ್ವಾಯತ್ತ ಸಂಸ್ಥೆಯಾದ ಎಂಪ್ರಿ ಸಿದ್ಧಪಡಿಸಿದ ಈ ಕ್ರಿಯಾ ಯೋಜನೆಗೆ 2024ರಲ್ಲಿ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಇದರಡಿ 2025-2030ರ ಅವಧಿಗೆ ವಿವಿಧ ಇಲಾಖೆಗಳು ಪ್ರಮುಖ ಕಾರ್ಯಕ್ಷಮತಾ ಸೂಚಕಗಳನ್ನು ನಿಗದಿಪಡಿಸಿಕೊಂಡಿವೆ. ಈ ಗುರಿಗಳನ್ನು ತಲುಪಲು ಜಿಲ್ಲಾ ಮಟ್ಟದ ಅಧಿಕಾರಿಗಳ ಸಾಮರ್ಥ್ಯ ವೃದ್ಧಿಸುವ ನಿಟ್ಟಿನಲ್ಲಿ ಕಳೆದ ವರ್ಷ 22 ಜಿಲ್ಲೆಗಳಲ್ಲಿ ತರಬೇತಿ ನೀಡಲಾಗಿತ್ತು. ಈ ಬಾರಿ (2026-27ನೇ ಸಾಲಿನಲ್ಲಿ) ರಾಜ್ಯದ ಎಲ್ಲಾ 31 ಜಿಲ್ಲೆಗಳಿಗೂ ಈ ಕಾರ್ಯಕ್ರಮ ವಿಸ್ತರಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆಯ ಕಾರ್ಯನೀತಿ, ಕಾರ್ಯತಂತ್ರಗಳು, ವಿವಿಧ ಇಲಾಖೆಗಳ ಪಾತ್ರ, ಅಲ್ಪಾವಧಿಯ ಹವಾಮಾನ ಮಾಲಿನ್ಯಕಾರಕಗಳ ಪರಿಣಾಮಗಳು ಹಾಗೂ ಜಿಲ್ಲಾಮಟ್ಟದ ದತ್ತಾಂಶಗಳ ಕುರಿತು ಸಮಗ್ರ ಉಪನ್ಯಾಸ ನೀಡಿದರು.

ಎಸಿಐಡಬ್ಲ್ಯುಆರ್‌ಎಂ ಸಂಸ್ಥೆಯ ಸಂಶೋಧನಾ ವಿಜ್ಞಾನಿಗಳಾದ ದೀಪಾ ರಾಣಿ ಅವರು, ಜಲ ಸಂಪನ್ಮೂಲ ವಲಯಕ್ಕೆ ಸಂಬಧಿಸಿದ ಹವಾಮಾನ ಕ್ರಿಯಾ ಯೋಜನೆ ಮತ್ತು ಕಾರ್ಯಕ್ರಮದ ಯಶಸ್ವಿ ಆಯೋಜನೆಯ ಕುರಿತು ವಿಸ್ತೃತ ಮಾಹಿತಿ ಹಂಚಿಕೊಡರು. ಜಿಲ್ಲಾ ಪಂಚಾಯತ್‌ನ ಎನ್‌ಆರ್‌ಡಿಎಂಎಸ್ ಅಧಿಕಾರಿ ರಾಮಚಂದ್ರ ರೆಡ್ಡಿ ಅವರು ತಮ್ಮ ವಿಭಾಗದ ಕಾರ್ಯಚಟುವಟಿಕೆಗಳ ಬಗ್ಗೆ ವಿವರಿಸಿದರು.

ಕಾರ್ಯಾಗಾರದ ಯೋಜನೆ, ಸಮನ್ವಯ ಮತ್ತು ನಿರ್ವಹಣೆಯನ್ನು ಎಂಪ್ರಿ ಸಂಸ್ಥೆಯ ತರಬೇತಿ ಅಸೋಸಿಯೇಟ್ ರುಚಿತಾ ಶ್ರೀ ಹಾಗೂ ತರಬೇತಿ ಸಹಾಯಕ ರಾಘವೇಂದ್ರ ಎನ್. ಅವರು ನೆರವೇರಿಸಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ-ಸಿಬ್ಬಂದಿಗಳು, ಸಂಘ-ಸಸ್ಥೆಗಳ ಪ್ರತಿನಿಧಿಗಳು ಹಾಗೂ ಶಿಕ್ಷಣ ಸಂಸ್ಥೆಗಳ ಸದಸ್ಯರು ಸಕ್ರಿಯವಾಗಿ ಭಾಗವಹಿಸಿದ್ದರು.

ಬಳ್ಳಾರಿಯಲ್ಲಿ ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆ: ಯುವ ಜನತೆಗೆ ಆರೋಗ್ಯ ಅರಿವು ಕಾರ್ಯಕ್ರಮ



ಬಳ್ಳಾರಿ,ಜೂ.11

ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆ ಅಂಗವಾಗಿ, ಕೆಎಸ್‌ಸಿಎಎಸ್‌ಐ-ಬಳ್ಳಾರಿ ಶಾಖೆಯ ವತಿಯಿಂದ ಬುಧವಾರ ನಗರದ ಆಲಂ ಕರಿಬಸಪ್ಪ ಇನ್ಸಿ ಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕಾಲೇಜಿನ ಸಭಾಂಗಣದಲ್ಲಿ ಕ್ಯಾಂಪಸ್ ಹೆಲ್ತ್ ಕನೆಕ್ಟ್ ಎಂಬ ವಿಶೇಷ ಆರೋಗ್ಯ ಸಂಪರ್ಕ ಕಾರ್ಯಕ್ರಮ ಜರುಗಿತು.

ಆರೋಗ್ಯವಂತ ಯುವಕರು, ಆರೋಗ್ಯವಂತ ಭವಿಷ್ಯ ಎಂಬ ಮಹತ್ತರ ಧ್ಯೇಯೋದ್ದೇಶದೊಂದಿಗೆ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕಾಲೇಜಿನ ತರಗತಿ ಪರಿಧಿಯ ವಿದ್ಯಾರ್ಥಿಗಳಲ್ಲಿ ಅತ್ಯಂತ ಸಕ್ರಿಯವಾಗಿ ಭಾಗವಹಿಸುವ ಮೂಲಕ ಆರೋಗ್ಯ ಜಾಗೃತಿ ಮೂಡಿಸುವ ಉದ್ದೇಶವಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಂಡಿದ್ದ ವೈದ್ಯರಾದ ಡಾ.ಶೇಕಪ್ಪ ಸಿ. ಮಳಗಿಮಣಿ, ಡಾ.ವೈ. ಗುರುಬಸವನ ಗೌಡ, ಡಾ.ಶಂಕರ ಮತ್ತು ಡಾ. ಶೈಕ್ ಫರ್ಹಾನ್ ಅವರು ಇಂದಿನ ಯುವ ಪೀಳಿಗೆಗೆ ಅಗತ್ಯವಿರುವ ಆರೋಗ್ಯಕರ ಜೀವನಶೈಲಿ, ರೋಗ ನಿರೋಧಕ ಆರೋಗ್ಯ ಸೇವೆಗಳು ಹಾಗೂ ಸಮಾಜದ ಬಗ್ಗೆ ಹೊಂದಿರಬೇಕಾದ ಸಾಮಾಜಿಕ ಜವಾಬ್ದಾರಿಗಳ ಕುರಿತು ಸವಿಸ್ತಾರವಾಗಿ ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

★ರಕ್ತದಾನ ಶಿಬಿರದ ಜಾಗೃತಿ:★

ಇದೇ ಸಂದರ್ಭದಲ್ಲಿ ಬಳ್ಳಾರಿಯ ಬಿಎಂಸಿಆರ್‌ಸಿ ಯಲ್ಲಿ ಮುಂಬರುವ ಜೂನ್ 13 ಮತ್ತು 14 ರಂದು ಆಯೋಜಿಸಲಾಗಿರುವ ಬೃಹತ್ ರಕ್ತದಾನ ಶಿಬಿರದ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲಾಯಿತು. ರಕ್ತದಾನ ಮಾಡುವುದರ ಮಹತ್ವವನ್ನು ವಿವರಿಸಿ, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಕೆಎಸ್‌ಸಿಎಎಸ್‌ಐ ಬಳ್ಳಾರಿ ಶಾಖೆಯ ಅಧ್ಯಕ್ಷ ಡಾ.ಶೇಕಪ್ಪ ಮಳಗಿಮಣಿ, ಕಾರ್ಯದರ್ಶಿ ಡಾ.ಗುಡೆಕೋಟೆ ರವಿಕುಮಾರ್, ಸಂಯುಕ್ತ ಕಾರ್ಯದರ್ಶಿ ಡಾ.ಶೈಕ್ ಫರ್ಹಾನ್, ಎಎಸ್‌ಐ ರಾಷ್ಟ್ರೀಯ ಕಾರ್ಯದರ್ಶಿ ಡಾ.ದಿವಾಕರ್ ಗಡ್ಡಿ ಹಾಗೂ ಕೆಎಸ್‌ಸಿಎಎಸ್‌ಐ ಖಜಾಂಚಿ ಡಾ.ವೈ.ಗುರು ಬಸವನ ಗೌಡ ಸೇರಿದಂತೆ ಶಸ್ತ್ರಚಿಕಿತ್ಸಾ ವಿಭಾಗದ ಸಹೋದ್ಯೋಗಿಗಳು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾಲೇಜು ವಿದ್ಯಾರ್ಥಿಗಳು ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ ಈ ಕಾರ್ಯಕ್ರಮವು, ಅವರಲ್ಲಿ ಆರೋಗ್ಯದ ಕುರಿತು ಹೊಸ ಭರವಸೆ ಹಾಗೂ ಮೆಚ್ಚುಗೆ ಮೂಡಿಸುವಲ್ಲಿ ಯಶಸ್ವಿಯಾಯಿತು.

ವಾಹನ ಸವಾರರಿಗೆ ಸುವರ್ಣಾವಕಾಶ: ಸಂಚಾರ ಇ-ಚಲನ್, ಸಾರಿಗೆ ಇಲಾಖೆ ಬಾಕಿ ದಂಡ ಪಾವತಿಗೆ ಶೇ.50 ರಿಯಾಯಿತಿ

ಬಳ್ಳಾರಿ,ಜೂ.11



ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ, ಮುಂಬರುವ ವಿಶೇಷ ಲೋಕ ಅದಾಲತ್ ಹಿನ್ನೆಲೆಯಲ್ಲಿ ಮೇ-2026 ಕ್ಕಿಂತ ಮೊದಲು ದಾಖಲಾಗಿರುವ ಸಂಚಾರ ನಿಯಮ ಉಲ್ಲಂಘನೆಯ ಇ-ಚಲನ್ ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರ ಅವಧಿಯಲ್ಲಿ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ವಿಶೇಷ ರಿಯಾಯಿತಿ ನೀಡಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ತಿಳಿಸಿದ್ದಾರೆ.

ಈ ವಿಶೇಷ ರಿಯಾಯಿತಿಯು ಸೀಮಿತ ಅವಧಿಗೆ ಮಾತ್ರ ಅನ್ವಯಿಸಲಿದ್ದು, 21.06.2026 ರಿಂದ 10.07.2026 ರವರೆಗೆ (ಕೇವಲ 20 ದಿನಗಳು ಮಾತ್ರ) ಇರಲಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು.

ಪೊಲೀಸ್ ಇಲಾಖೆ ಹಾಗೂ ಸಾರಿಗೆ ಇಲಾಖೆಯ ನಿಯಮಾವಳಿಗಳ ಪ್ರಕಾರ ದಾಖಲಾಗಿರುವ ಅರ್ಹ ಬಾಕಿ ಸಂಚಾರ ಇ-ಚಲನ್ ಮತ್ತು ಸಾರಿಗೆ ಇಲಾಖೆಯ ಪ್ರಕರಣಗಳಿಗೆ ಮಾತ್ರ ಈ ಶೇ.50 ರಿಯಾಯಿತಿ ಅನ್ವಯಿಸುತ್ತದೆ.

ದಂಡ ಪಾವತಿಸುವ ವಿಧಾನ:

ಸಾರ್ವಜನಿಕರು ತಮ್ಮ ವಾಹನಗಳ ಬಾಕಿ ದಂಡವನ್ನು ಶೇ.50 ರಷ್ಟು ರಿಯಾಯಿತಿ ದರದಲ್ಲಿ ಕರ್ನಾಟಕ ಒನ್ ಕೇಂದ್ರಗಳು, ನಗರದ ಸಂಚಾರಿ ಪೊಲೀಸ್ ಠಾಣೆ, ಅಧಿಕೃತ ಆನ್‌ಲೈನ್ ಪೋರ್ಟಲ್‌ಗಳು (ಪರಿವಾಹನ ಪೋರ್ಟಲ್/ಕೆ.ಎಸ್.ಪಿ ಆಪ್), ಪ್ರಾದೇಶಿಕ ಸಾರಿಗೆ ಇಲಾಖೆ ಕಚೇರಿಯ ಮೂಲಕ ಪಾವತಿಸಬಹುದಾಗಿದೆ.

ನ್ಯಾಯಾಲಯಗಳಲ್ಲಿ ಮತ್ತು ಪೊಲೀಸ್ ಇಲಾಖೆಯಲ್ಲಿ ಬಾಕಿ ಉಳಿದಿರುವ ಲಕ್ಷಾಂತರ ಸಂಚಾರ ಪ್ರಕರಣಗಳನ್ನು ಸೌಹಾರ್ದಯುತವಾಗಿ ಹಾಗೂ ಶೀಘ್ರವಾಗಿ ಇತ್ಯರ್ಥಪಡಿಸಲು ಈ ಸುವರ್ಣಾವಕಾಶವನ್ನು ನೀಡಲಾಗಿದೆ.

ಸಾರ್ವಜನಿಕರು ಹಾಗೂ ವಾಹನ ಸವಾರರು ಯಾವುದೇ ಕಾನೂನು ಪ್ರಕ್ರಿಯೆಗಳ ಜಂಜಾಟವಿಲ್ಲದೆ, ಈ ರಿಯಾಯಿತಿಯ ಲಾಭವನ್ನು ಪಡೆದು ತಮ್ಮ ಬಾಕಿ ದಂಡವನ್ನು ಪಾವತಿಸಿ ಸಹಕರಿಸಬೇಕು ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶರು ವಿನಂತಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಬಳ್ಳಾರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕು ಕಾನೂನು ಸೇವಾ ಸಮಿತಿಗಳು, ಸಮೀಪದ ಸಂಚಾರಿ ಪೊಲೀಸ್ ಠಾಣೆ ಅಥವಾ ಪ್ರಾದೇಶಿಕ ಸಾರಿಗೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರೂಪನಗುಡಿಯಲ್ಲಿ ಖೇತ್ ಬಚಾವೋ ಅಭಿಯಾನ ಅತಿಯಾದ ರಾಸಾಯನಿಕ ರಸಗೊಬ್ಬರಗಳ ಬಳಕೆ ಕೃಷಿಗೆ ಮಾರಕ



ಬಳ್ಳಾರಿ,ಜೂ.11

ಅತಿಯಾದ ರಾಸಾಯನಿಕ ಗೊಬ್ಬರಗಳ ಬಳಕೆಯಿಂದ ಮಣ್ಣು ತನ್ನ ನೈಸರ್ಗಿಕ ಸೂಕ್ಷ್ಮಜೀವಿಗಳನ್ನು ಕಳೆದುಕೊಂಡು ಗಟ್ಟಿಯಾಗುತ್ತಿದ್ದು, ಇದು ಕೃಷಿ ವಲಯಕ್ಕೆ ಮಾರಕವಾಗಿದೆ ಎಂದು ಹಗರಿಯ ಐ.ಸಿ.ಎ.ಆರ್-ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿ ಡಾ.ರವಿ ಎಸ್. ಅವರು ಆತಂಕ ವ್ಯಕ್ತಪಡಿಸಿದರು.

ಬಳ್ಳಾರಿ ತಾಲ್ಲೂಕಿನ ರೂಪನಗುಡಿ ಗ್ರಾಮದಲ್ಲಿ ಕೃಷಿ ಭೂಮಿಗಳ ಸಂರಕ್ಷಣೆ ಹಾಗೂ ಸುಸ್ಥಿರ ಕೃಷಿಯ ಮಹತ್ವದ ಕುರಿತು ಬುಧವಾರ ಹಮ್ಮಿಕೊಳ್ಳಲಾಗಿದ್ದ ಖೇತ್ ಬಚಾವೋ ಅಭಿಯಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಣ್ಣು ಒಟ್ಟು 14 ಅತ್ಯಗತ್ಯ ಪೋಷಕಾಂಶಗಳನ್ನು ಒಳಗೊಂಡಿರುತ್ತದೆ. ರೈತರು ತಮ್ಮ ಜಮೀನಿನ ಮಣ್ಣನ್ನು ಕಡ್ಡಾಯವಾಗಿ ಪರೀಕ್ಷಿಸಿ, ಅದರಲ್ಲಿ ಯಾವ ಪೋಷಕಾಂಶಗಳ ಕೊರತೆಯಿದೆ ಎಂಬುದನ್ನು ಅರಿತು, ಅದಕ್ಕೆ ತಕ್ಕಂತೆ ಮಾತ್ರ ಗೊಬ್ಬರಗಳನ್ನು ಬಳಸಬೇಕು. ಸಮತೋಲಿತ ಮತ್ತು ಹಿತಮಿತವಾದ ಗೊಬ್ಬರ ಬಳಕೆಯಿಂದ ಮಣ್ಣಿನ ಆರೋಗ್ಯ ರಕ್ಷಿಸುವುದಲ್ಲದೆ, ಕೃಷಿ ವೆಚ್ಚವನ್ನೂ ಕಡಿಮೆ ಮಾಡಿಕೊಳ್ಳಬಹುದು ಎಂದು ರೈತರಿಗೆ ಸಲಹೆ ನೀಡಿದರು.

ಕೃಷಿ ವಿಸ್ತರಣೆ ವಿಜ್ಞಾನಿ ಡಾ.ನವೀನ್ ಕುಮಾರ್ ಪಿ. ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ರೈತರು ನಕಲಿ ಬೀಜ ಮತ್ತು ರಾಸಾಯನಿಕಗಳ ವಿಚಾರದಲ್ಲಿ ಮೋಸ ಹೋಗುತ್ತಿರುವುದು ಹೆಚ್ಚಾಗುತ್ತಿದೆ. ಇದನ್ನು ತಡೆಯಲು ರೈತರು ತಾವು ಖರೀದಿಸುವ ಬೀಜ, ಗೊಬ್ಬರ ಹಾಗೂ ರಾಸಾಯನಿಕಗಳಿಗೆ ಕಡ್ಡಾಯವಾಗಿ ಅಧಿಕೃತ ರಸೀದಿಯನ್ನು ಪಡೆದುಕೊಳ್ಳಬೇಕು ಎಂದು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ಕಾರ್ಯಕ್ರಮದಲ್ಲಿ ರೂಪನಗುಡಿಯ ಕೃಷಿ ಅಧಿಕಾರಿ ಗಾಯಿತ್ರಿ, ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಜಂಬಣ್ಣ, ಬಳ್ಳಾರಿಯ ಆತ್ಮ ಯೋಜನೆಯ ಉಪ ಯೋಜನಾ ನಿರ್ದೇಶಕಿ ಕವಿತಾ, ರೂಪನಗುಡಿ ಜಿ.ಪಂ ಮಾಜಿ ಅಧ್ಯಕ್ಷ ನಾಗರಾಜು, ಕೃಷಿಕ ಸಮಾಜದ ತಾಲ್ಲೂಕು ನಿರ್ದೇಶಕ ಗೋಪಾಲ ರೆಡ್ಡಿ (ಲಿಂಗದೇವನಹಳ್ಳಿ) ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸುಮಾರು 150ಕ್ಕೂ ಹೆಚ್ಚು ರೈತರು ಮತ್ತು ರೈತ ಮಹಿಳೆಯರು ಭಾಗವಹಿಸಿದ್ದರು.

ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ; ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ಬಳ್ಳಾರಿ,ಜೂ.11

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಬಳ್ಳಾರಿ ಜಿಲ್ಲೆಯ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಆಯ್ಕೆಗಾಗಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಆಯ್ಕೆ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ತಾತ್ಕಾಲಿಕ ಪಟ್ಟಿಯನ್ನು ಸಿದ್ಧಪಡಿಸಲಾಗಿದ್ದು, ಅಭ್ಯರ್ಥಿಗಳು ಹಾಗೂ ಸಾರ್ವಜನಿಕರು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಂಬಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತಿ ಕಚೇರಿ, ಆಯಾ ಗ್ರಾಮ ಪಂಚಾಯತಿ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿ ಮತ್ತು ಜಿಲ್ಲಾಧಿಕಾರಿಗಳ ಕಚೇರಿಯ ಸೂಚನಾ ಫಲಕಗಳಲ್ಲಿ ಪರಿಶೀಲಿಸಿಕೊಳ್ಳಬಹುದು.

ತಾತ್ಕಾಲಿಕವಾಗಿ ಆಯ್ಕೆಯಾದ ಅಂಗನವಾಡಿ ಸಹಾಯಕಿಯರ ವಿವರ: ಅರಣಾ ತಂದೆ ಹೊನ್ನುರಪ್ಪ(ಮೆರಿಟ್): ಬಳ್ಳಾರಿ (ನಗರ) ಯೋಜನೆಯ ಎಂ.ವಿ.ನಗರ ಅಂಗನವಾಡಿ ಕೇಂದ್ರ. ಕೆ.ಬಿಯಾ ಗಂಡ ರವಿಕುಮಾರ(ಮೆರಿಟ್): ಸಿರುಗುಪ್ಪ ಯೋಜನೆಯ ಸಿರುಗುಪ್ಪ-37 ಅಂಗನವಾಡಿ ಕೇಂದ್ರ.

ಪಿ.ಎಸ್.ಚೈತ್ರ ತಂದೆ ಪಿ.ಶೇಖಣ್ಣ(ನ್ಯಾಯಾಲಯ ತೀರ್ಪಿನನ್ವಯ): ಸಿರುಗುಪ್ಪ ಯೋಜನೆಯ ಗೋಸುಬಾಳು-1 ಅಂಗನವಾಡಿ ಕೇಂದ್ರ.

ಆಕ್ಷೇಪಣೆ ಸಲ್ಲಿಕೆಗೆ ಜೂನ್ 25 ಕೊನೆಯ ದಿನವಾಗಿದ್ದು, ಪ್ರಕಟಿತ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಧಿಸಿದತೆ ಯಾವುದೇ ರೀತಿಯ ಆಕ್ಷೇಪಣೆಗಳಿದ್ದಲ್ಲಿ, ಸಾರ್ವಜನಿಕರು ಅಥವಾ ಅಭ್ಯರ್ಥಿಗಳು ಸೂಕ್ತ ದಾಖಲೆಗಳೊಂದಿಗೆ ಸಂಬಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಬೇಕಾಗಿದೆ.

ನಿಗದಿತ ಸಮಯದ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರತಿಭೆ ಪ್ರದರ್ಶನಕ್ಕೆ ಡಿಜಿಟಲ್ ವೇದಿಕೆ -ಕುಲಸಚಿವ ಪ್ರೊ.ವಿ ಲೋಕೇಶ್

ಬಳ್ಳಾರಿ,ಜೂ.11-



ಪ್ರಸ್ತುತ ದಿನಮಾನಗಳಲ್ಲಿ ಯುವಜನತೆ ತಮ್ಮಲ್ಲಿರುವ ಅಡಗಿರುವ ಪ್ರತಿಭೆಯನ್ನು ಜಗತ್ತಿಗೆ ಪರಿಚಯಿಸಲು ಮತ್ತು ಪ್ರದರ್ಶಿಸಲು ಸಾಮಾಜಿಕ ಮಾಧ್ಯಮಗಳು ಅತ್ಯುತ್ತಮ ವೇದಿಕೆಯಾಗಿ ಮಾರ್ಪಟ್ಟಿವೆ ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ವಿ ಲೋಕೇಶ್ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣ ದೇವರಾಯ ವಿಶ್ವವಿದ್ಯಾಲಯದ ಡಾ.ಬಿ.ಆರ್ ಅಂಬೇಡ್ಕರ್ ಸಭಾಭವನದಲ್ಲಿ ದಿ.ರಮಣಿಕ ಗುಪ್ತ ಅವರ ಸ್ಮರಣಾರ್ಥ ಆಯೋಜಿಸಿರುವ 10 ದಿನಗಳ ರಾಷ್ಟ್ರೀಯ ರಂಗಭೂಮಿ ಕಾರ್ಯಾಗಾರದ ಸಮಾರೋಪ ಸಮಾರಂಭವನ್ನು ಪ್ರೊ.ಶಾಂತನಾಯ್ಕ್ ಅವರ ರಚಿತ ವೇರಾಳು ನಾಟಕ ದೃಶ್ಯ ಪ್ರದರ್ಶಿಸುವ ಮೂಲಕ ಕಾರ್ಯಕ್ರಮವು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಗುರುತಿಸಿಕೊಳ್ಳಲು ಶ್ರಮವಹಿಸಬೇಕು. ವಿವಿಯ ವಿದ್ಯಾರ್ಥಿಗಳು ಅಂತಾರಾಷ್ಟ್ರಿಯ ಮಟ್ಟದಲ್ಲಿ ಗುರುತಿಸುವಂತಾಗಬೇಕು. ಹತ್ತು ದಿನಗಳ ಕಾರ್ಯಾಗಾರವು ಯಶಸ್ವಿಯಾಗಿರು ವುದು ಸಂತಸವಾಗಿದೆ ಎಂದರು.

ಸಮಾರೋಪ ನುಡಿಯಲ್ಲಿ ಮಾತ ನಾಡಿದ ವಿಜಯನಗರ ಜಿಲ್ಲೆಯ ಎನ್‌ಎಸ್‌ಡಿ ರಂಗ ನಿರ್ದೇಶಕ ಸಾಂಬಶಿವ ದಳವಾಯಿ ಅವರು, ಪ್ರತಿಯೊಬ್ಬರು ಸಾಹಿತ್ಯದ ರಸವನ್ನು ಸವಿಯುವ ಮೂಲಕ ಗುರುತಿಸಿಕೊಳ್ಳಬೇಕು. ಹತ್ತು ದಿನಗಳಲ್ಲಿ ನಾಟಕ ತರಬೇತಿ ಹಾಗೂ ನಾಟಕ ರಚನೆ ಸುಲಭದ ಮಾತಲ್ಲ. ನಾಟಕಕ್ಕೆ ನಿರ್ದಿಷ್ಟವಾದ ಸಮಯ ಬೇಕು. ಇಂತಹ ರಂಗಭೂಮಿ ಕಾಂಗಾರಗಳು ಮೈಸೂರು ಭಾಗಗಳಲ್ಲಿ ಕಾಣಿಸಿಕೊಳ್ಳುತ್ತಿದ್ದವು. ಬಳ್ಳಾರಿಯಲ್ಲಿ ಆಯೋಜಿಸಿದ್ದು ಸಂತಸಕರ ಎಂದರು.

ವಿವಿಯ ಕಲಾ ನಿಕಾಯದ ಡೀನರಾದ ಪ್ರೊ.ರಾಬರ್ಟ್ ಜೋಸ್, ಟಿ.ಕೊಟ್ಟಪ್ಪ ರಂಗಭೂಮಿ ಕಲಾವಿದೆ ವೀಣಾ, ರಂಗ ನಿರ್ದೇಶಕ ಮಹೇಶ್ ವೇದಿಕೆಯಲ್ಲಿದ್ದರು.

ವಿಭಾಗದ ಮುಖ್ಯಸ್ಥ ಪ್ರೊ. ಶಾಂತಾನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿ ಅತಿಥಿಗಳನ್ನು ಸ್ವಾಗತಿಸಿದರು. ಡಾ.ಅಣ್ಣಾಜಿ ಕೃಷ್ಣಾರೆಡ್ಡಿ ನಿರೂಪಿಸಿ, ವಂದಿಸಿದರು.ಈ ಸಂದರ್ಭದಲ್ಲಿ ಪ್ರೊ.ಶಾಂತನಾಯ್ಕ್ ಅವರ ರಚಿತ ವೇರಾಳು ನಾಟಕ ಪ್ರದರ್ಶನ ಮಾಡಲಾಯಿತು. ನಾಟಕ ನಿರ್ದೇಶನ, ಜನಪದ ರಂಗ, ರಂಗಭೂಮಿ ಮತ್ತು ರಂಗಶಿಕ್ಷಣ, ಬಯಲಾಟ ಮೊದಲಾದ ಮಾದರಿಯ ಹತ್ತಕ್ಕೂ ಹೆಚ್ಚು ವಿವಿಧ ಕಾರ್ಯಾಗಾರದ 10 ದಿನಗಳ ಕಾಲ ನಡೆದ 250ಕ್ಕೂ ಅಧಿಕ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಶಿಬಿರಾರ್ಥಿ ಗಳು ಹಾಗೂ ಕಲಾವಿದರು ಉಪಸ್ಥಿತರಿದ್ದರು.

ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರುದ್ಧ ಜಾಗೃತಿ ಮೂಡಿಸಿ: ಡಾ. ಸುರೇಶ ಇಟ್ನಾಳ

ಕೊಪ್ಪಳ ಜೂ.11

ಸರ್ಕಾರದ ಇತರೆ ಸಂಬಂಧಿತ ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಜಿಲ್ಲೆಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರುದ್ಧ ಬಲವಾದ ಜನಾಭಿಪ್ರಾಯ ರೂಪುಗೊಳ್ಳುವಂತೆ, ಧನಾತ್ಮಕ ಪರಿಣಾಮ ಬೀರುವ ಹಾಗೂ ಸಾಮಾಜಿಕ ಸಮಸ್ಯೆ ನಿವಾರಣೆಯಾಗುವಂತೆ ಕಾರ್ಯಕ್ರಮವನ್ನು ಆಯೋಜಿಸಬೇಕೆಂದು ಜಿಲ್ಲಾಧಿಕಾರಿಗಳು ಹಾಗೂ ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂತರಾಷ್ಟ್ರೀಯ ಕಾರ್ಮಿಕ ಸಂಸ್ಥೆಯು (ಐ.ಎಲ್.ಓ) 2002 ರಲ್ಲಿ ಜೂನ್ 12ನೇ ದಿನವನ್ನು ವಿಶ್ವ ಬಾಲಕಾರ್ಮಿಕ ದಿನ ಎಂದು ಘೋಷಣೆ ಮಾಡಿರುತ್ತದೆ. ಅಂದಿನಿಂದ ವಿಶ್ವ ಸಂಸ್ಥೆಯ ಎಲ್ಲಾ ಮಿತ್ರ ರಾಷ್ಟ್ರಗಳು ಪ್ರತಿ ವರ್ಷ ಜೂನ್ 12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನವನ್ನು ಆಯೋಜಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ, ರಾಜ್ಯಾದ್ಯಂತ ಸರ್ಕಾರದ ಎಲ್ಲಾ ಇಲಾಖೆ, ನಿಗಮ, ಮಡಳಿ, ಪ್ರಾಧಿಕಾರ, ಸಂಸ್ಥೆ, ನಿರ್ದೇಶನಾಲಯ ಶಾಲಾ ಕಾಲೇಜು, ಕಛೇರಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರುಗಳಿಗೆ 12ನೇ ಜೂನ್ 2026ರಂದು ಬಾಲ ಹಾಗೂ ಕಿಶೋರ ಕಾರ್ಮಿಕರಿಂದ ದುಡಿಮೆಯನ್ನು ಬಯಸುವುದಿಲ್ಲವೆಂಬ ಪ್ರಮಾಣ ವಚನ ಸ್ವೀಕರಿಸಲು ಕ್ರಮ ವಹಿಸಬೇಕಾಗಿದೆ.

ಸರ್ಕಾರದ ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ, ಅರ್ಥವತ್ತಾದ ಕಾರ್ಯಕ್ರಮ ಹಾಗೂ ಚಟುವಟಿಕೆಗಳನ್ನು ಹಮ್ಮಿಕೊಂಡು, ಕಾರ್ಯಕ್ರಮದಲ್ಲಿ ಚುನಾಯಿತ ಜನಪ್ರತಿನಿಧಿಗಳು, ಕಾನೂನು ಸೇವೆಗಳ ಪ್ರಾಧಿಕಾರ, ಸರ್ಕಾರೇತರ ಸಂಸ್ಥೆಗಳು, ಸ್ವಸಹಾಯ ಸಂಘಗಳು, ಕಾರ್ಮಿಕ ಸಂಘಗಳು, ಉದ್ಯೋಗದಾತರ ಸಂಘಗಳು, ಮತ್ತು ಬಾಲಕಾರ್ಮಿಕ ಪದ್ಧತಿ ವಿರುದ್ಧ ಆಂದೋಲನ ನಡೆಸುತ್ತಿರುವ ಎಲ್ಲಾ ಇತರೆ ಸಂಘ ಸಂಸ್ಥೆಗಳು ಹಾಗೂ ಸಾಮಾಜಿಕ ಕಾರ್ಯಕರ್ತರುಗಳನ್ನು ಆಹ್ವಾನಿಸಿ, ಜಿಲ್ಲೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರುದ್ಧ ಬಲವಾದ ಜನಾಭಿಪ್ರಾಯ ರೂಪುಗೊಳ್ಳುವಂತೆ, ಋಣಾತ್ಮಕ ಪರಿಣಾಮ ಬೀರುವ ಹಾಗೂ ಸಾಮಾಜಿಕ ಸಮಸ್ಯೆಯ ನಿವಾರಣೆಯಾಗುವಂತೆ ಮುಂದಿನ ಎಲ್ಲಾ ಕ್ರಮಗಳನ್ನು ಸರ್ಕಾರದ ಶಿಷ್ಟಾಚಾರದನ್ವಯ ಕೈಗೊಳ್ಳಬೇಕು.

ಜಿಲ್ಲೆಯ ಪ್ರತಿ ಗ್ರಾಮಗಳಲ್ಲಿ ಆಯಾ ಗ್ರಾಮ ಪಂಚಾಯತಿ ವತಿಯಿಂದ ಜೂನ್ 12 ರಂದು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿಯ ಕುರಿತು ಡಂಗೂರವನ್ನು ಸಾರಿಸಬೇಕು. ಪ್ರತಿ ಗ್ರಾಮ, ತಾಲೂಕು ಹಾಗೂ ಜಿಲ್ಲೆಗಳಲ್ಲಿ ಶಾಲಾ-ಕಾಲೇಜು ಎನ್.ಸಿ.ಸಿ ಹಾಗೂ ಎನ್.ಎಸ್.ಎಸ್ ವಿದ್ಯಾರ್ಥಿಗಳಿಂದ ಜಾಥಾ ಕಾರ್ಯಕ್ರಮವನ್ನು ಆಯೋಜಿಸಬೇಕು. ಜಾಥಾ ಕಾರ್ಯಕ್ರಮದಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿ ಕುರಿತು ಘೋಷಣೆಗಳನ್ನು ಕೂಗಿಸುವುದರ ಮೂಲಕ ಅರಿವು ಮೂಡಿಸಬೇಕು.

ಬಾಲಕಾರ್ಮಿಕ ವಿರೋಧಿ ದಿನದ ಕುರಿತು ಪ್ರಾಥಮಿಕ, ಪ್ರೌಢಶಾಲಾ ಮಕ್ಕಳಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಪ್ರಬಂಧ, ಕಥಾ, ಭಾಷಣ, ಚರ್ಚಾ ಸ್ಪರ್ಧೆ, ಚಿತ್ರಕಲೆ, ರಸ ಪ್ರಶ್ನೆ ಕಾರ್ಯಕ್ರಮ ಮತ್ತು ಮಕ್ಕಳಿಂದ ನಾಟಕ ಪ್ರದರ್ಶನಗಳನ್ನು ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಕ್ರಮವಹಿಸಬೇಕು.

ಇದಲ್ಲದೇ ಜಿಲ್ಲೆಯಾದ್ಯಂತ ಜೂನ್ 13 ರಿಂದ ಜೂ. 30ರ ವರೆಗೆ ಬಾಲ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಅಭಿಯಾನ ಕಾರ್ಯಕ್ರಮವನ್ನು ಆಯೋಜಿಸಬೇಕು. ಜೂ. 12 ರಂದು ಎಲ್ಲಾ ಗ್ರಾಮ ಪಂಚಾಯತಿ, ಪುರಸಭೆ ಹಾಗೂ ನಗರಸಭೆ ವತಿಯಿಂದ ಕಸ ವಿಲೇವಾರಿ ವಾಹನಗಳಲ್ಲಿ ಉಚಿತವಾಗಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ವಿರೋಧಿ ಪದ್ಧತಿಯ ಕುರಿತು ಘೋಷಣೆಗಳನ್ನು ಕೂಗಿಸುವ ಮೂಲಕ ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಸಂಡೂರು: ಮತಗಟ್ಟೆ ಅಧಿಕಾರಿಗಳ ತರಬೇತಿ ಕೇಂದ್ರಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಭೇಟಿ, ಅಗತ್ಯ ನಿರ್ದೇಶನ

ಬಳ್ಳಾರಿ,ಜೂ.11-



ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಸಂಡೂರು ವಿಧಾನಸಭಾ ಕ್ಷೇತ್ರದ ಮತಗಟ್ಟೆ ಅಧಿಕಾರಿಗಳು ಮತ್ತು ಮತಗಟ್ಟೆ ಮೇಲ್ವಿಚಾರಕರಿಗೆ ಮಂಗಳವಾರ ಹಮ್ಮಿಕೊಂಡಿದ್ದ ವಿಶೇಷ ತರಬೇತಿ ಕಾರ್ಯಾಗಾರಕ್ಕೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯೂ ಆದ ನಾಗೇಂದ್ರ ಪ್ರಸಾದ್.ಕೆ ಅವರು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿ ದರು.

ಸಂಡೂರು ಪಟ್ಟಣದ ಕುಮಾರ ಸ್ವಾಮಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ ಪಾಲ್ಗೊಂಡ ಜಿಲ್ಲಾಧಿಕಾರಿಯವರು, ಎಸ್‌ಐಆರ್ ಪ್ರಕ್ರಿಯೆಯನ್ನು ಅತ್ಯಂತ ಜವಾಬ್ದಾರಿಯಿಂದ ನಿಭಾಯಿಸುವ ಕುರಿತು ಅಧಿಕಾರಿಗಳಿಗೆ ಅಗತ್ಯ ಮಾಹಿತಿ ಮತ್ತು ಮಹತ್ವದ ನಿರ್ದೇಶನಗಳನ್ನು ನೀಡಿದರು. ಎಸ್‌ಐಆರ್ ಪ್ರಕ್ರಿಯೆಯ ಕರ್ತವ್ಯದಲ್ಲಿ ಯಾವುದೇ ರೀತಿಯ ಲೋಪದೋಷಗಳಿಗೆ ಆಸ್ಪದ ನೀಡಬಾರದು. ಪ್ರತಿಯೊಬ್ಬ ಮತಗಟ್ಟೆ ಅಧಿಕಾರಿಯೂ ನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಮತ್ತು ಎದುರಾಗಬಹುದಾದ ಸವಾಲುಗಳನ್ನು ಹೇಗೆ ನಿಭಾಯಿಸಬೇಕು ಎಂಬುದರ ಕುರಿತು ಸ್ಪಷ್ಟ ಜ್ಞಾನ ಹೊಂದಿರಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿಗಳೇ ಖುದ್ದಾಗಿ ಸ್ಥಳಕ್ಕೆ ಆಗಮಿಸಿ, ತರಬೇತಿಯ ಗುಣಮಟ್ಟವನ್ನು ಪರಿಶೀಲಿಸಿದ್ದಲ್ಲದೆ, ಅಧಿಕಾರಿಗಳ ಅನುಮಾನಗಳಿಗೆ ಸೂಕ್ತ ಸಲಹೆ ಹಾಗೂ ಸೂಚನೆಗಳನ್ನು ನೀಡುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ತುಂಬಿದರು.

ತರಬೇತಿ ಕಾರ್ಯಾಗಾರದಲ್ಲಿ ಸಂಡೂರು ವಿಧಾನಸಭಾ ಕ್ಷೇತ್ರದ ನೋಡೆಲ್ ಅಧಿಕಾರಿ ಆದ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ತಹಶೀಲ್ದಾರ ಅನಿಲ್ ಕುಮಾರ್, ಜಿಲ್ಲಾ ಚುನಾವಣಾಧಿಕಾರಿ ಕಚೇರಿಯ ನಿರಂಜನ ಸೇರಿ ಇತರೆ ಅಧಿಕಾರಿಗಳು ಇದ್ದರು.

ಒಂದನೇಯ ಪುಟದಿಂದ

ರಾಜ್ಯ ಆಡಳಿತದ ಕಾರ್ಯಕ್ಷಮತೆಗೆ ಒತ್ತು: ಸಿಎಂ ಡಿಕೆಶಿ

ಬಿ.ಎಸ್. ಮೂರ್ತಿ ಅವರು ಹೇಳಿ ದ್ದಾರೆ.

ಆಗಸ್ಟ್‌ನಲ್ಲಿ ನಡೆಯಲಿರುವ ಗ್ರೇಟರ್ ಬೆಂಗಳೂರು ಅಥಾರಿಟಿ ಚುನಾವಣೆಗಳ ಹಿನ್ನೆಲೆಯಲ್ಲೂ ಈ ಸಭೆ ಮಹತ್ವ ಪಡೆದುಕೊಂಡಿದೆ.

ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಆಡಳಿತಾತ್ಮಕ ಕಾರ್ಯಕ್ಷಮತೆಯಲ್ಲಿ ಶೀಘ್ರ ಫಲಿತಾಂಶ ತೋರಿಸುವ ಉದ್ದೇಶವನ್ನು ಮುಖ್ಯಮಂತ್ರಿ ಹೊಂದಿದ್ದಾರೆ ಎಂದು ಹೇಳಲಾಗುತ್ತಿದೆ.

ಈ ಸಭೆಯ ಮೂಲಕ ಜಿಲ್ಲಾಮಟ್ಟದ ಅಧಿಕಾರಿಗಳಿಗೆ ಹೊಸ ಕಾರ್ಯವಿಧಾನ () ಹಾಗೂ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ನೀಡುವ ಸಾಧ್ಯತೆ ಇದೆ.

ಎಥೆನಾಲ್ ಮಿಶ್ರಿತ ಪೆಟ್ರೋಲ್‌ಗೆ ಅಬಕಾರಿ ಸುಂಕದಿಂದ ವಿನಾಯಿತಿ ನೀಡಿದ ಕೇಂದ್ರ ಸರ್ಕಾರ

20 ನಂತರ 30 ಕಡೆಗೆ ಭಾರತದ ಪ್ರಯಾಣ: ಪ್ರಸ್ತುತ 20 ಪೆಟ್ರೋಲ್ (20% ಎಥೆನಾಲ್ ಹೊಂದಿರುವ ಮಿಶ್ರಣ) ಅನ್ನು ದೇಶಾದ್ಯಂತ ಪ್ರಚಾರ ಮಾಡಲಾಗುತ್ತಿದೆ. ಸರ್ಕಾರವು ಈಗ 22, 25, 27 ಮತ್ತು 30 ನಂತಹ ಹೆಚ್ಚಿನ ಎಥೆನಾಲ್ ಮಿಶ್ರಣಗಳೊಂದಿಗೆ ಪೆಟ್ರೋಲ್‌ಗೆ ದಾರಿ ಮಾಡಿಕೊಟ್ಟಿದೆ. ಇತ್ತೀಚೆಗೆ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ () ಈ ಹೊಸ ಇಂಧನಗಳಿಗೆ ಗುಣಮಟ್ಟದ ಮಾನದಂಡಗಳನ್ನು ಬಿಡುಗಡೆ ಮಾಡಿದೆ. ಮೇ 15ರಿಂದ ಜಾರಿಗೆ ಬರುವ ಹೊಸ ಮಾನದಂಡಗಳು ಎಥೆನಾಲ್ ಶೇಕಡಾವಾರು, ಆಕ್ಟೇನ್ ಮಟ್ಟ, ಸಲ್ಫರ್ ಅಂಶ, ಆವಿ ಒತ್ತಡ ಮತ್ತು ಸುರಕ್ಷತಾ ಅವಶ್ಯಕತೆಗಳಂತಹ ನಿಯತಾಂಕಗಳನ್ನು ನಿರ್ದಿಷ್ಟಪಡಿಸುತ್ತವೆ.

ಸರ್ಕಾರ ಎಥೆನಾಲ್ ಅನ್ನು ಏಕೆ ಉತ್ತೇಜಿಸುತ್ತಿದೆ?: ಭಾರತವು ವಿಶ್ವದ ಮೂರನೇ ಅತಿದೊಡ್ಡ ಕಚ್ಚಾ ತೈಲ ಆಮದುದಾರ ಮತ್ತು ಗ್ರಾಹಕ ರಾಷ್ಟ್ರವಾಗಿದ್ದು ಅದರ ಅವಶ್ಯಕತೆಗಳಲ್ಲಿ ಗಮನಾರ್ಹ ಭಾಗವನ್ನು ವಿದೇಶದಿಂದ ಪಡೆಯುತ್ತಿದೆ. ಹೆಚ್ಚುತ್ತಿರುವ ಎಥೆನಾಲ್ ಮಿಶ್ರಣವು ಹಲವಾರು ಪ್ರಯೋಜನಗಳನ್ನು ನೀಡುತ್ತದೆ. ಇದು ಕಚ್ಚಾ ತೈಲ ಆಮದು ಬಿಲ್ ಅನ್ನು ಕಡಿಮೆ ಮಾಡುತ್ತದೆ ಮತ್ತು ವಿದೇಶಿ ವಿನಿಮಯವನ್ನು ಉಳಿಸುತ್ತದೆ. ಇದು ರೈತರಿಗೆ ಅಂದ್ರೆ, ನಿರ್ದಿಷ್ಟವಾಗಿ ಕಬ್ಬು ಮತ್ತು ಧಾನ್ಯ ಉತ್ಪಾದಕರಿಗೆ ಹೆಚ್ಚುವರಿ ಮಾರುಕಟ್ಟೆ ಅವಕಾಶಗಳನ್ನು ಸೃಷ್ಟಿಸುತ್ತದೆ ಮತ್ತು ಇದರಿಂದಾಗಿ ಅವರ ಆದಾಯವನ್ನು ಹೆಚ್ಚಿಸುತ್ತದೆ. ಇದಲ್ಲದೆ ಇದು ಪರಿಸರಕ್ಕೆ ಹಾನಿ ಮಾಡುವ ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಪೆಟ್ರೋಲ್‌ನಲ್ಲಿ 30% ಎಥೆನಾಲ್ ಮಿಶ್ರಣವನ್ನು ಸಾಧಿಸುವುದು ಸರ್ಕಾರದ ದೀರ್ಘಕಾಲೀನ ಗುರಿಯಾಗಿದೆ.

ಗ್ರಾಹಕರ ಮೇಲೆ ಇದರ ಪರಿಣಾಮವೇನು?: ತಜ್ಞರ ಪ್ರಕಾರ, ಸರಾಸರಿ ಗ್ರಾಹಕರ ಮೇಲೆ ತಕ್ಷಣದ ಪರಿಣಾಮ ಸೀಮಿತವಾಗಿರುತ್ತದೆ. ಆದರೆ ಹೆಚ್ಚಿನ ಎಥೆನಾಲ್ ಮಿಶ್ರಣಗಳನ್ನು ಹೊಂದಿರುವ ಇಂಧನಗಳ ಲಭ್ಯತೆಯು ಭವಿಷ್ಯದಲ್ಲಿ ಹೆಚ್ಚಾಗುವ ಸಾಧ್ಯತೆಯಿದೆ. ವಾಹನ ಮಾಲೀಕರು 20 ಮತ್ತು ಹೆಚ್ಚಿನ ಮಿಶ್ರಣ ಇಂಧನಗಳಿಗೆ ಸಂಬಂಧಿಸಿದ ಮೈಲೇಜ್, ಎಂಜಿನ್ ಕಾರ್ಯಕ್ಷಮತೆ ಮತ್ತು ನಿರ್ವಹಣಾ ವೆಚ್ಚಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಕಳೆದ ವರ್ಷ ನಡೆಸಿದ ಸಮೀಕ್ಷೆಯಲ್ಲಿ ಅನೇಕ ಗ್ರಾಹಕರು 20 ಇಂಧನದ ಬಗ್ಗೆ ಆತಂಕ ವ್ಯಕ್ತಪಡಿಸಿದರು.

ತೆರಿಗೆ ವಿನಾಯಿತಿಗಳ ನಿರ್ಧಾರವು ಏನನ್ನು ಸೂಚಿಸುತ್ತದೆ?: ಹೆಚ್ಚಿನ ಎಥೆನಾಲ್-ಮಿಶ್ರಣ ಪೆಟ್ರೋಲ್ ಮೇಲಿನ ಅಬಕಾರಿ ಸುಂಕ ವಿನಾಯಿತಿಯು ಸರ್ಕಾರವು 20 ನಲ್ಲಿ ನಿಲ್ಲಿಸಲು ಉದ್ದೇಶಿಸಿಲ್ಲ ಎಂದು ಸೂಚಿಸುತ್ತದೆ. ಭಾರತವು 30 ನಂತಹ ಹೆಚ್ಚಿನ ಮಿಶ್ರಣ ಇಂಧನಗಳತ್ತ ವೇಗವಾಗಿ ಸಾಗುತ್ತಿದೆ. ಇದು ಮುಂಬರುವ ವರ್ಷಗಳಲ್ಲಿ ದೇಶದ ಇಂಧನ ವಲಯ ಮತ್ತು ಸಕ್ಕರೆ ಉದ್ಯಮ ಎರಡಕ್ಕೂ ಗಮನಾರ್ಹವಾಗಿ ಪ್ರಯೋಜನವನ್ನು ನೀಡುತ್ತದೆ.

ಅದಿತಿ ಆಸ್ಪತ್ರೆ ವಿರುದ್ಧ ಗಂಭೀರ ಆರೋಪ: ಮೋಸ, ನಿಯಮ ಉಲ್ಲಂಘನೆ ಕುರಿತು ಸಮಗ್ರ ತನಿಖೆಗೆ ಆಗ್ರಹ

ಮಾಡಲಾಗಿದೆ. ಇದುವರೆಗೆ ಖರ್ಚು ಮಾಡಿದ ಹಣಕ್ಕೆ ಸಮರ್ಪಕ ಲೆಕ್ಕಪತ್ರವೂ ನೀಡಿಲ್ಲ'' ಎಂದು ಆರೋಪಿಸಿದರು.

ಇದೇ ವೇಳೆ, ''ಈ ಸಂಬಂಧ ಜನವರಿ ತಿಂಗಳಲ್ಲಿ ದೂರು ಸಲ್ಲಿಸಿದ ನಂತರ ತಾಲ್ಲೂಕು ಆರೋಗ್ಯಾಧಿಕಾರಿಗಳು () ಆಸ್ಪತ್ರೆಯ ಮುಖ್ಯಸ್ಥೆ ಡಾ. ದೀಪಾ ಹನುಮಸಾಗರ ಅವರಿಗೆ ನೋಟಿಸ್ ಜಾರಿ ಮಾಡಿದ್ದರು. ನೋಟಿಸ್‌ನಲ್ಲಿ ಕೆಲವು ಕಾನೂನು ಉಲ್ಲಂಘನೆಗಳ ಬಗ್ಗೆ ಉಲ್ಲೇಖಿಸಲಾಗಿದೆ ಎನ್ನುವ ಮಾಹಿತಿ ಇದೆ. ಆದಾಗ್ಯೂ, ಇದುವರೆಗೆ ಯಾವುದೇ ಕಾನೂನು ಕ್ರಮ ಕೈಗೊಳ್ಳದಿರುವುದು ಅನುಮಾನಗಳಿಗೆ ಕಾರಣವಾಗಿದೆ'' ಎಂದು ಹೇಳಿದರು.

ಆಸ್ಪತ್ರೆಯ ವಿರುದ್ಧ ಬಂದಿರುವ ಆರೋಪಗಳ ಕುರಿತು ಆರೋಗ್ಯ ಇಲಾಖೆ ಸಮಗ್ರ ತನಿಖೆ ನಡೆಸಿ, ಆಸ್ಪತ್ರೆಯ ಪರವಾನಗಿ, ವೈದ್ಯಕೀಯ ಸೇವೆಗಳ ಗುಣಮಟ್ಟ, ಐವಿಎಫ್ ಚಿಕಿತ್ಸೆ ಯ ದಾಖಲೆಗಳು, ರೋಗಿಗಳಿಂದ ವಸೂಲಿ ಮಾಡಿರುವ ಶುಲ್ಕ ಹಾಗೂ ವೈದ್ಯಕೀಯ ವರದಿಗಳ ಸತ್ಯಾಸತ್ಯತೆಯನ್ನು ಪರಿಶೀಲಿಸಬೇಕು ಎಂದು ಅವರು ಒತ್ತಾಯಿಸಿದರು.

ಆರೋಗ್ಯ ಸೇವೆಯಂತಹ ಸೂಕ್ಷ್ಮ ಕ್ಷೇತ್ರದಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ಅಥವಾ ಮೋಸ ನಡೆಯಬಾರದು. ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಿ ಸತ್ಯಾಸತ್ಯತೆ ಹೊರತೆಗೆದು ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಪತ್ರಿಕಾಗೋಷ್ಠಿಯಲ್ಲಿ ಆಗ್ರಹಿಸಲಾಯಿತು.

ರಾಯಚೂರ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕೃಷಿ ಇಲಾಖೆಯಿಂದ ಖೇತ್ ಬಚಾವೋ ಅಭಿಯಾನ

ಪರಿವರ್ತನೆ ಮತ್ತು ಕೃಷಿ ತ್ಯಾಜ್ಯ ವಸ್ತುಗಳನ್ನು ಭೂಮಿಗೆ ಸೇರಿಸುವುದರಿಂದ ಬೆಳೆಗೆ ಸಮಗ್ರ ಪೋಷಕಾಂಶಗಳು ದೊರೆಯುತ್ತವೆ ಎಂದು ತಿಳಿಸಿದರು.

ರೈತ ಸಂಪರ್ಕ ಕೇಂದ್ರ ಕುರ್ಡಿ ಹಾಗೂ ಕಲ್ಲೂರಿನ ಕೃಷಿ ಅಧಿಕಾರಿಗಳಾದ ಭೀಮರಾಯ ಪಡದಳ್ಳಿ ರೈತರಿಗೆ ರಾಷ್ಟ್ರಿಯ ಆಹಾರ ಭದ್ರತಾ ಯೋಜನೆ ಹಾಗೂ ಕೃಷಿ ಇಲಾಖೆಯ ಇತರ ಸೌಲಭ್ಯಗಳ ಬಗ್ಗೆ ವಿವಾರವಾದ ಮಾಹಿತಿಯನ್ನು ನೀಡಿದರು.

ರೈತರಿಗೆ ಬಗ್ಗೆ ವಿವರವಾದ ಮಾಹಿತಿಯನ್ನು ನೀಡಿದರು ಹಾಗೂ ಬೀಜೋಪಚಾರದ ಪ್ರಾತ್ಯಕ್ಷಿಕೆಯನ್ನು ತೋರಿಸಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆಯ ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಯಲ್ಲಪ್ಪ, ರೈತ ಸಂಪರ್ಕ ಕೇಂದ್ರ ಕಲ್ಲೂರು ಲೆಕ್ಕ ಸಹಾಯಕ ಅಮರೇಶ ಮಾಡಗಿರಿ, ಹಾಗೂ ವಿವಿಧ ಗ್ರಾಮಗಳ ನೂರಾರು ರೈತರು ಭಾಗವಹಿಸಿದರು.

ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜೂನ್ 14ರಿಂದ ಉಚಿತ ಯೋಗ ಶಿಬಿರ

ಹಾಗೂ ಆತ್ಮವಿಶ್ವಾಸ ಹೆಚ್ಚಿಸಲು ಯೋಗ ನೆರವಾಗುತ್ತದೆ ಎಂದರು.

ಆರೋಗ್ಯಕರ ಜೀವನಕ್ಕಾಗಿ ಪ್ರತಿಯೊಬ್ಬರೂ ಪ್ರತಿದಿನ ಯೋಗಾಭ್ಯಾಸ ಮಾಡಬೇಕು ಎಂದು ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಅಶೋಕ ಕುಮಾರ, ನಾಗಾರ್ಜುನ, ರವಿ ದೋತರಬಂಡಿ, ಶ್ರೀದೇವಿ, ಋತುರಾಜ ಗೌಡ, ಕಿಶೋರ ಕುಮಾರ, ನಾಗರಾಜ ಹಾಗೂ ಅಮರೇಶ ಉಪಸ್ಥಿತರಿದ್ದರು.

ಪ್ರಧಾನಿ ನರೇಂದ್ರ ಮೋದಿಜಿಯವರ ದೀರ್ಘವಾದಿ ಆಡಳಿತಕ್ಕಾಗಿ ವಿಶೇಷ ಪೂಜೆ

ನಾಯಕ, ಕೆ.ವೆಂಕಟೇಶ, ವಿಜಯಕುಮಾರ ಮೇಟಿ, ರಾಜೇಂದ್ರ ಭೋಗಾವತಿ,ಈರಣ್ಣ ನಾಯಕ, ಗೋಪಾಲ ಇಬ್ರಾಂಪುರ್ ಸೇರಿದಂತೆ ನೂರಾರು ಕಾರ್ಯಕರ್ತರು ಭಾಗವಹಿಸಿದರು.

ಹಿರಿಯ ಪ್ರಾಥಮಿಕ ಶಾಲೆಯ ಅಭಿವೃದ್ಧಿಗೆ ಮನವಿ

ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರುಪಾದಿ ಕೆ ಗೋಮರ್ಸಿ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಅಗತ್ಯ ಮೂಲಸೌಕರ್ಯಗಳು ಲಭ್ಯವಾಗುವುದು ಅತ್ಯಂತ ಮುಖ್ಯವಾಗಿದ್ದು, ಗೋಮರ್ಸಿ ಶಾಲೆಯ ಅಭಿವೃದ್ಧಿಗೆ ಗ್ರಾಮ ಪಂಚಾಯಿತಿ ಹಾಗೂ ಸಂಬಂಧಿಸಿದ ಇಲಾಖೆಗಳು ವಿಶೇಷ ಗಮನ ಹರಿಸಬೇಕೆಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಗ್ರಾಮ ಪಂಚಾಯಿತಿ ಅಧಿಕಾರಿಗಳು ಶಾಲೆಯ ಸಮಸ್ಯೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರು,ಗ್ರಾಮಸ್ಥರಾದ ಅಪ್ಪಯ್ಯ ,ಸಂಶುದ್ದೀನ್, ಉಮೇಶ್ ಉಪ್ಪಾರ, ವಿರುಪಣ್ಣ, ಅಜ್ಮೀರ್ ಸಾಬ್,ನಾಗಪ್ಪ,ವೀರೇಶ್ ಸೇರಿದಂತೆ ಅನೇಕ ಸಾರ್ವಜನಿಕರು ಉಪಸ್ಥಿತರಿದ್ದರು.

ದೇವದಾಸಿ ಪದ್ಧತಿ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಿ: ವಾಸಂತಿ ಉಪ್ಪಾರ ಕರೆ



ಕೊಪ್ಪಳ ಜೂನ್ 11

ಸಮಾಜದ ಸ್ವಾಸ್ಥ್ಯವನ್ನು ಹಾಳು ಮಾಡುವ ಅನಿಷ್ಟ ಪದ್ಧತಿಯಾದ ದೇವದಾಸಿ ಪದ್ಧತಿಯ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಪ್ರದಾನ ವ್ಯವಸ್ಥಾಪಕರಾದ ವಾಸಂತಿ ಉಪ್ಪಾರ ಅವರು ಕರೆ ನೀಡಿದ್ದಾರೆ.

ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಸಭಾಂಗಣದಲ್ಲಿ ಮಾಜಿ ದೇವದಾಸಿ ಮಹಿಳೆಯರೊಂದಿಗೆ ಇತ್ತೀಚೆಗೆ (ಜೂ. 8ರಂದು) ಹಮ್ಮಿಕೊಂಡಿದ್ದ ಸಂವಾದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ದೇವದಾಸಿ ಬಿಡುವ ಪದ್ಧತಿಯು ಅತ್ಯಂತ ಕೆಟ್ಟ ಸಾಮಾಜಿಕ ಪಿಡುಗು ಆಗಿದ್ದು, ಇದು ಮುಗ್ಧ ಮಹಿಳೆಯರ ಬದುಕನ್ನು ಕತ್ತಲೆಗೆ ನೂಕುತ್ತದೆ. ಈ ಅನಿಷ್ಠ ಪದ್ಧತಿಯನ್ನು ನಿರ್ಮೂಲನೆಗೆ ಸರ್ಕಾರ ಕಾನೂನು ಜಾರಿಗೆ ತಂದಿದ್ದು ಯಾವುದೇ ಮಹಿಳೆಯನ್ನು ದೇವದಾಸಿ ಪದ್ಧತಿಗೆ ಒಳಪಡಿಸಿದಲ್ಲಿ ಅದಕ್ಕೆ ಕಾರಣರಾದವರಿಗೆ, ಅದಕ್ಕೆ ಪ್ರೋತ್ಸಾಹ ನೀಡಿದವರಿಗೆ ಕಠಿಣ ಶಿಕ್ಷೆ ವಿಧಿಸಲಾಗುತ್ತದೆ. ಯಾವುದೇ ರೂಪದಲ್ಲಿ ದೇವದಾಸಿ ಪದ್ಧತಿಯನ್ನು ಆಚರಿಸುವದು ಕಾನೂನು ಪ್ರಕಾರ ಶಿಕ್ಷಾರ್ಹ ಅಪರಾಧ ಆಗಿರುತ್ತದೆ. ಹಾಗಾಗಿ ಮಾಜಿ ದೇವದಾಸಿಯರಾದ ನೀವುಗಳು ಯಾರೇ ಈ ಅನಿಷ್ಠ ಪದ್ಧತಿಯನ್ನು ಆಚರಿಸುವದು ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವ ಮೂಲಕ, ಈ ಪದ್ಧತಿಯ ನಿರ್ಮೂಲನೆಗೆ ಕೈ ಜೋಡಿಸಬೇಕೆಂದರು. ಸರ್ಕಾರವು ಮಾಜಿ ದೇವದಾಸಿಯರ ಸಮೀಕ್ಷೆಯನ್ನು ನಡೆಸಿದ್ದು, ಸರ್ವೆ ವರದಿಯ ಆಧಾರದ ಮೇಲೆ ಮಾಜಿ ದೇವದಾಸಿ ಮಹಿಳೆಯರ ಜೀವನ ಸುಧಾರಣೆಗೆ ಸರ್ಕಾರದ ಮಟ್ಟದಲ್ಲಿ ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು. ಈ ಸಮಾಲೋಚನಾ ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಅಮರೇಶ್ ಹಾವಿನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅನ್ನಪೂರ್ಣ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ, ಮಹಿಳಾ ಅಭಿವೃದ್ಧಿ ನಿಗಮದ ನಿರೀಕ್ಷಕಿ ಪೂರ್ಣಿಮಾ ಹಾಗೂ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಜನರ ಮನ ರಂಜಿಸಿದ ತೊಗಲು ಗೊಂಬೆಯಾಟ, ಜನಪದ ಸಂಗೀತ

ಕೊಪ್ಪಳ ಜೂನ್ 11

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಪ್ಪಳ ಹಾಗೂ ಹಿಂದೂ ಧಾರ್ಮಿಕ ದತ್ತಿ ಇಲಾಖೆಯ ಶ್ರೀ ಕ್ಷೇತ್ರ ಹುಲಿಗೆಮ್ಮ ದೇವಿ ದೇವಸ್ಥಾನದ ಸಹಯೋಗದಲ್ಲಿ ಮಂಗಳವಾರ (ಜೂ. 9ರಂದು) ಹುಲಿಗಿ ಗ್ರಾಮದಲ್ಲಿ ಹಮ್ಮಿಕೊಂಡ ಕಲಾ ನಡಿಗೆ ಜನರ ಬಳಿಗೆ ವಿನೂತನ ಕಾರ್ಯಕ್ರಮದಲ್ಲಿ ತೊಗಲು ಗೊಂಬೆಯಾಟ ಮತ್ತು ಜನಪದ ಸಂಗೀತವು ಜನರ ಮನ ರಂಜಿಸಿತು.

ಕಲಾ ನಡಿಗೆ ಜನರ ಬಳಿಗೆ ವಿನೂತನ ಕಾರ್ಯಕ್ರಮಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವೀರೇಶ ಶಿಲ್ಪಿ, ಗುರುನಾಥ ಪಾಯಸದವರು ಹಾಗೂ ರವಿ ಇನ್ನಿತರು ಉಪಸ್ಥಿತರಿದ್ದರು. ಕೇಶಪ್ಪ ಶಿಳ್ಳೆಖ್ಯಾತ ಅವರು ವಿರಾಟ ಪರ್ವ ಪ್ರಸಂಗ ತೊಗಲು ಗೊಂಬೆಯಾಟ ಹಾಗೂ ಫಕೀರಸಿದ್ಧಪ್ಪ ಹಾಗೂ ಸಂಗಡಿಗರು ಚೌಡಕಿ ಪದಗಳ ಗಾಯನ ಕಾರ್ಯಕ್ರಮವನ್ನು ಪ್ರಸ್ತುತಪಡಿಸಿದರು



ರೋಟರಿ ಕ್ಲಬ್ಸ್ ವತಿಯಿಂದ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳ ವಿತರಣೆ

ಕಲಬುರಗಿ,ಜೂ.11-

ಸಮಾಜದ ಆರ್ಥಿಕವಾಗಿ ಹಿಂದುಳಿದ ಮಹಿಳೆಯರ ಸ್ವಾವಲಂಬನೆಗೆ ಉತ್ತೇಜನ ನೀಡುವ ಉದ್ದೇಶದಿಂದ ರೋಟರಿ ಕ್ಲಬ್ಸ್ ಆಫ್ ಗುಲ್ಬರ್ಗಾ ನೇತೃತ್ವದಲ್ಲಿ ನಗರದ ರೋಟರಿ ಕ್ಲಬ್ ಪಾಲ್ ಹ್ಯಾರಿಸ್ ಆಡಿಟೋರಿಯಂನಲ್ಲಿ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳ ವಿತರಣಾ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಎಸ್‌ಬಿಐ ಆರ್‌ಸೆಟಿ ಕಲಬುರಗಿಯ ನಿರ್ದೇಶಕರಾದ ನಂದಕಿಶೋರ್ ಮಳಖೇಡಕರ್ ಭಾಗವಹಿಸಿ ಫಲಾನುಭವಿಗಳಿಗೆ ಹೊಲಿಗೆ ಯಂತ್ರಗಳನ್ನು ವಿತರಿಸಿ, ಮಹಿಳೆಯರು ಸ್ವಯಂ ಉದ್ಯೋಗದ ಮೂಲಕ ಆರ್ಥಿಕವಾಗಿ ಸದೃಢರಾಗಬೇಕು ಎಂದು ಅವರು ಕರೆ ನೀಡಿದರು.

ಗೌರವ ಅತಿಥಿಗಳಾಗಿ ಆರ್‌ಟಿಎನ್. ಮಣಿಲಾಲ್ ಶಾ (ಪಿಡಿಜಿ), ಆರ್‌ಟಿಎನ್. ಡಾ. ಗೌತಮ್ ಜಹಗೀರದಾರ (ಪಿಡಿಜಿ), ಆರ್‌ಟಿಎನ್. ಮಾಣಿಕ್ ಪವಾರ್ (ಪಿಡಿಜಿ) ಹಾಗೂ ಆರ್‌ಟಿಎನ್. ಸಿಎ ಮಾಣಿಕ್ ಮಂಡಕನಳ್ಳಿ (ಎಜಿ, ವಲಯ) ಉಪಸ್ಥಿತರಿದ್ದರು.

ರೋಟರಿ ಕ್ಲಬ್ ಆಫ್ ಗುಲ್ಬರ್ಗಾ, ರೋಟರಿ ಕ್ಲಬ್ ಆಫ್ ಗುಲ್ಬರ್ಗಾ ನಾರ್ತ್, ರೋಟರಿ ಕ್ಲಬ್ ಆಫ್ ಗುಲ್ಬರ್ಗಾ ಮಿಡ್‌ಟೌನ್, ರೋಟರಿ ಕ್ಲಬ್ ಆಫ್ ಗುಲ್ಬರ್ಗಾ ಸನ್‌ಸಿಟಿ, ರೋಟರಿ ಕ್ಲಬ್ ಆಫ್ ಗುಲ್ಬರ್ಗಾ ಸೌತ್ ಹಾಗೂ ರೋಟರಿ ಕ್ಲಬ್ ಆಫ್ ದಿ ರೋಸ್‌ಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ವಿವಿಧ ರೋಟರಿ ಕ್ಲಬ್‌ಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಸದಸ್ಯರು ಹಾಗೂ ಫಲಾನುಭವಿಗಳು ಉಪಸ್ಥಿತರಿದ್ದು, ನಂತರ ಫೆಲೋಶಿಪ್ ಕಾರ್ಯಕ್ರಮ ನಡೆಯಿತು.

ಹೊಸಲಿಂಗಪುರದಲ್ಲಿ ಅಂಗನವಾಡಿ ಮಕ್ಕಳ ಶಾಲಾ ಪ್ರವೇಶೋತ್ಸವ



ಕೊಪ್ಪಳ ಜೂ.11

ಅಂಗನವಾಡಿ ಕೇಂದ್ರಗಳಲ್ಲಿ ಮೂರು ವರ್ಷ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳನ್ನು ಕಲಿತು 2027-27ನೇ ಸಾಲಿನಲ್ಲಿ 1ನೇ ತರಗತಿಗೆ ದಾಖಲಾಗುತ್ತಿರುವ ಮಕ್ಕಳ ಶಾಲಾ ಪ್ರವೇಶೋತ್ಸವ ಕಾರ್ಯಕ್ರಮವನ್ನು ಕೊಪ್ಪಳ ಶಿಶು ಅಭಿವೃದ್ಧಿ ಯೋಜನೆಯ ಹೊಸಲಿಂಗಪುರ ಗ್ರಾಮದ 5 ಅಂಗನವಾಡಿ ಕೇಂದ್ರಗಳಲ್ಲಿ ಬುಧವಾರ (ಜೂ. 10ರಂದು) ನಡೆಯಿತು.

ಕೊಪ್ಪಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಅಮರೇಶ್ ಹಾವಿನ ಅವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿದರು. ಬಳಿಕ ಮಾತನಾಡಿ, ಬುನಾದಿ ಹಂತದ ಶಿಕ್ಷಣ ಬಹಳ ಮುಖ್ಯ ಆದ್ದರಿಂದ ಮೂರರಿಂದ ಆರು ವಯಸ್ಸಿನ ಮಕ್ಕಳ ದೈಹಿಕ, ಬೌದ್ಧಿಕ, ಮಾನಸಿಕ, ಬೆಳವಣಿಗೆಗೆ ಶಾಲಾ ಪೂರ್ವ ಶಿಕ್ಷಣ ಕಲಿಕೆ ತುಂಬಾ ಅವಶ್ಯಕತೆ ಇದೆ. ಈ ಹಿನ್ನೆಲೆಯಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಕಲಬುರಗಿ, ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಕೊಪ್ಪಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಕಲಿಕೆ ಟಾಟಾ ಟ್ರಸ್ಟ್ ಕೊಪ್ಪಳ ಇವರ ಸಹಭಾಗಿತ್ವದಲ್ಲಿ ಜಿಲ್ಲೆಯಲ್ಲಿ ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮವನ್ನು ಅನುಷ್ಠಾನ ಮಾಡಲಾಗುತ್ತಿದೆ ಎಂದು ಹೇಳಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮೂರು ವರ್ಷ ಶಾಲಾ ಪೂರ್ವ ಶಿಕ್ಷಣ ಚಟುವಟಿಕೆಗಳನ್ನು ಕಲಿತು ಶಾಲಾ ಸನ್ನದ್ಧತೆಯೊಂದಿಗೆ 2027-27ನೇ ಸಾಲಿನಲ್ಲಿ ಪ್ರಾಥಮಿಕ ಶಾಲೆಗಳಿಗೆ 1ನೇ ತರಗತಿಗೆ ದಾಖಲಾಗುತ್ತಿರುವ ಮಕ್ಕಳ ಶಾಲಾ ಪ್ರವೇಶೋತ್ಸವ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗುತ್ತಿದೆ ಎಂದು ತಿಳಿಸಿದರು. ಇದೇ ವೇಳೆ ಕೊಪ್ಪಳ ಶಿಶು ಅಭಿವೃದ್ಧಿ ಯೋಜನೆಯ ಹೊಸಲಿಂಗಪುರ ಗ್ರಾಮದ 5 ಅಂಗನವಾಡಿ ಕೇಂದ್ರಗಳಿಂದ ಒಟ್ಟು 20 ಮಕ್ಕಳು ಹೊಸಲಿಂಗಪುರದ ಸರ್ಕಾರಿ ಪ್ರಾಥಮಿಕ ಶಾಲೆಗೆ ದಾಖಲಾಗುವ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭದ ಮೂಲಕ ಶಾಲೆಗೆ ಪ್ರವೇಶೋತ್ಸವವನ್ನು ಮಾಡಲಾಯಿತು.

ಈ ಕಾರ್ಯಕ್ರಮದಲ್ಲಿ ಕೊಪ್ಪಳ ಸಿಡಿಪಿಓ ರೋಹಿಣಿ ಕೊಟಗಾರ, ಪ್ರಾಥಮಿಕ ಶಾಲೆಯ ಮುಖ್ಯ ಉಪಾಧ್ಯಾಯರಾದ ನಾಗರತ್ನ, ಕಲಿಕೆ ಟಾಟಾ ಟ್ರಸ್ಟ್ ಕೊಪ್ಪಳ ಜಿಲ್ಲಾ ವ್ಯವಸ್ಥಾಪಕರಾದ ಅಶೋಕ್, ವಲಯ ಮೇಲ್ವಿಚಾರಕರಾದ ಸುಮಂಗಲ ಸಜ್ಜನ್ ಸೇರಿದಂತೆ ಹೊಸಲಿಂಗಪುರ ಗ್ರಾಮದ 5 ಅಂಗನವಾಡಿಗಳ ಕಾರ್ಯಕರ್ತೆಯರು, ಮಕ್ಕಳ ಪೋಷಕರು ಹಾಗೂ ಮಕ್ಕಳು ಭಾಗವಹಿಸಿದ್ದರು.

ಕೆಕೆಆರ್‌ಡಿಬಿಯಿಂದ ಮಹತ್ವದ ಆರ್ಥಿಕ ನೆರವು

ಬೆಂಗಳೂರು/ಕಲಬುರಗಿ,ಜೂ.11-

ಕಲಬುರಗಿ, ಬೀದರ್ ಹಾಗೂ ರಾಜ್ಯ ರಾಜಧಾನಿ ಬೆಂಗಳೂರಿನ ನಡುವಿನ ವಿಮಾನ ಸೇವೆಗಳು ಅಧಿಕೃತವಾಗಿ ಪುನರಾರಂಭಗೊಂಡಿದ್ದು, ಈ ಸೇವೆ ಮರು ಆರಂಭಗೊಳ್ಳಲು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ನೀಡಿರುವ ಆರ್ಥಿಕ ನೆರವು ಪ್ರಮುಖ ಪಾತ್ರ ವಹಿಸಿದೆ ಎಂದು ಕೆಕೆಆರ್‌ಡಿಬಿ ಅಧ್ಯಕ್ಷ ಹಾಗೂ ಶಾಸಕ ಡಾ.ಅಜಯ್ ಸಿಂಗ್ ತಿಳಿಸಿದ್ದಾರೆ.

ಬುಧವಾರ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಸ್ಟಾರ್ ಏರ್‌ನ ಮೊದಲ ವಿಮಾನಕ್ಕೆ ಕೇಕ್ ಕತ್ತರಿಸುವ ಮೂಲಕ ಶುಭ ಹಾರೈಸಿದ ಅವರು, ಈ ಭಾಗದ ಜನರ ಬಹುಕಾಲದ ಬೇಡಿಕೆ ಈಡೇರಿದ ಸಂತಸ ವ್ಯಕ್ತಪಡಿಸಿದರು.

ಕೈಗಾರಿಕೋದ್ಯಮಿಗಳು, ವ್ಯಾಪಾರಸ್ಥರು ಹಾಗೂ ಸಾರ್ವಜನಿಕರ ನಿರಂತರ ಒತ್ತಾಯದ ಹಿನ್ನೆಲೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಆರ್ಥಿಕ, ಕೈಗಾರಿಕಾ ಮತ್ತು ಸಾಮಾಜಿಕ ಅಭಿವೃದ್ಧಿಗೆ ವಿಮಾನ ಸಂಪರ್ಕ ಮಹತ್ತರ ಕೊಡುಗೆ ನೀಡಲಿದ್ದು, ಹೂಡಿಕೆ ಆಕರ್ಷಣೆಗೆ ಇದು ಪೂರಕವಾಗಲಿದೆ ಎಂದು ಅವರು ಹೇಳಿದರು. 2022ರ ನವೆಂಬರ್‌ನಲ್ಲಿ ಆರಂಭಗೊಂಡಿದ್ದ ಈ ವಿಮಾನ ಸೇವೆ ಕೆಲವು ತಾಂತ್ರಿಕ ಕಾರಣಗಳಿಂದ ಸ್ಥಗಿತಗೊಂಡಿತ್ತು. ಬಳಿಕ ಸಚಿವರಾದ ಎಂ.ಬಿ. ಪಾಟೀಲ್, ಪ್ರಿಯಾಂಕ್ ಖರ್ಗೆ, ಈಶ್ವರ್ ಖಂಡ್ರೆ, ರಹೀಮ್ ಖಾನ್ ಹಾಗೂ ಡಾ.ಶರಣಪ್ರಕಾಶ್ ಪಾಟೀಲ್ ಅವರೊಂದಿಗೆ ಚರ್ಚಿಸಿ ಸೇವೆಯನ್ನು ಪುನರಾರಂಭಿಸಲು ಗಂಭೀರ ನಿರ್ಧಾರ ಕೈಗೊಳ್ಳಲಾಯಿತು ಎಂದು ತಿಳಿಸಿದರು.

28.44 ಕೋಟಿ ರೂ. ಅನುದಾನ : ಕಲಬುರಗಿ ಹಾಗೂ ಬೀದರ್ ವಿಮಾನ ಸೇವೆಗಳ ಸುಗಮ ಕಾರ್ಯಾಚರಣೆಗಾಗಿ ತಲಾ 14.22 ಕೋಟಿ ರೂ. ಅನುದಾನದ ಅಗತ್ಯವಿದ್ದು, ಒಟ್ಟು ವೆಚ್ಚದ ಶೇಕಡ 80ರಷ್ಟು ಮೊತ್ತವನ್ನು ಕೆಕೆಆರ್‌ಡಿಬಿ ಭರಿಸುತ್ತಿದೆ. ಉಳಿದ ಶೇ.20ರಷ್ಟು ಅನುದಾನವನ್ನು ರಾಜ್ಯ ಸರ್ಕಾರದ ಬೃಹತ್ ಕೈಗಾರಿಕಾ ಇಲಾಖೆಯಿಂದ ಒದಗಿಸಲಾಗಿದೆ.

ಪ್ರತಿ ವರ್ಷ ವಿಮಾನಯಾನ ಸಂಸ್ಥೆಗಳು ಸೇವೆ ಮುಂದುವರಿಸಲು ಅಗತ್ಯವಿರುವ ಆರ್ಥಿಕ ಬೆಂಬಲದ ವ್ಯವಸ್ಥೆಯನ್ನು ಸರ್ಕಾರ ಮತ್ತು ಮಂಡಳಿ ಒಟ್ಟಾಗಿ ನಿರ್ವಹಿಸುತ್ತಿದ್ದು, ಈ ಕ್ರಮದಿಂದ ವಿಮಾನ ಸೇವೆ ನಿರಂತರವಾಗಿ ಲಭ್ಯವಾಗುವ ವಿಶ್ವಾಸ ವ್ಯಕ್ತಪಡಿಸಲಾಗಿದೆ.

ಕಲಬುರಗಿ ಬೆಂಗಳೂರು ವಿಮಾನ ಸಂಪರ್ಕದಿಂದ ಕೇವಲ ಕಲಬುರಗಿ ಜಿಲ್ಲೆಗೆ ಮಾತ್ರವಲ್ಲದೆ, ಕಲ್ಯಾಣ ಕರ್ನಾಟಕದ ಆರು ಜಿಲ್ಲೆಗಳ ಜನತೆಗೆ ಅನುಕೂಲವಾಗಲಿದೆ. ಜೊತೆಗೆ ನೆರೆಯ ಮಹಾರಾಷ್ಟ್ರ ಹಾಗೂ ತೆಲಂಗಾಣ ರಾಜ್ಯಗಳ ಪ್ರಯಾಣಿಕರೂ ಇದರ ಪ್ರಯೋಜನ ಪಡೆಯಲಿದ್ದಾರೆ.

ಪ್ರಾದೇಶಿಕ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡುವ ಉದ್ದೇಶದಿಂದ ಕೆಕೆಆರ್‌ಡಿಬಿ ವತಿಯಿಂದ ಪಾಲಿಸಿ ಪ್ಲಾನಿಂಗ್ ಡೇಟಾ ಅನಾಲಿಟಿಕ್ಸ್ ವಿಂಗ್ ( ) ಆರಂಭಿಸಲಾಗುತ್ತಿದೆ ಎಂದು ಡಾ.ಅಜಯ್ ಸಿಂಗ್ ತಿಳಿಸಿದರು.

ಪ್ರಖ್ಯಾತ ಅರ್ಥಶಾಸ್ತ್ರಜ್ಞ ಪ್ರೊ.ಗೋವಿಂದ್ ರಾವ್ ಅವರ ಸಲಹೆಯಂತೆ ಆರಂಭವಾಗುತ್ತಿರುವ ಈ ಘಟಕವು ಪ್ರವಾಸೋದ್ಯಮ, ಕೈಗಾರಿಕೆ, ಕೃಷಿ ಹಾಗೂ ಜವಳಿ ಕ್ಷೇತ್ರಗಳಿಗೆ ಸಂಬಂಧಿಸಿದ ನೀತಿಗಳ ರೂಪಿಕರಣ ಮತ್ತು ಅನುಷ್ಠಾನಕ್ಕೆ ನೆರವಾಗಲಿದೆ ಎಂದು ಹೇಳಿದರು.

ಬೆಂಗಳೂರು ದೇಶದ ಸಿಲಿಕಾನ್ ವ್ಯಾಲಿ. ಕಲ್ಯಾಣ ಕರ್ನಾಟಕ ಭಾಗವು ಹಿಂದುಳಿದ ಪ್ರದೇಶ ಎಂಬ ಹಣೆಪಟ್ಟಿಯಿಂದ ಹೊರಬರಬೇಕಾದರೆ ಹೆಚ್ಚಿನ ಕೈಗಾರಿಕೆಗಳು ಬರಬೇಕು. ಅದಕ್ಕಾಗಿ ವೇಗವಾದ ಮತ್ತು ವಿಶ್ವಾಸಾರ್ಹ ಸಂಪರ್ಕ ವ್ಯವಸ್ಥೆ ಅಗತ್ಯ. ಕಲಬುರಗಿ ಬೆಂಗಳೂರು ವಿಮಾನ ಸೇವೆ ಈ ದಿಸೆಯಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಡಾ.ಅಜಯ್ ಸಿಂಗ್ ಹೇಳಿದರು.

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನ

ಅಂಕಪಟ್ಟಿ. ಪೋಷಕರು ಸರ್ಕಾರಿ,ಅರೆಸರ್ಕಾರಿ,ಖಾಸಗಿ ನೌಕರರಾಗಿದ್ದಲ್ಲಿ ಇತ್ತೀಚಿನ ವೇತನ ಪ್ರಮಾಣ ಪತ್ರ, ಆರ್.ಡಿ ಸಂಖ್ಯೆ ಹೊಂದಿದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ. ವಿದ್ಯಾರ್ಥಿಯ ಆಧಾರ ಕಾರ್ಡ, ಪಾಲಕರ, ಪೋಷಕರ ಆಧಾರ ಕಾರ್ಡ,ಸೇರಿದಂತೆ ಅಗತ್ಯ ದಾಖಲೆಗಳೊಂದಿಗೆ ವಿದ್ಯಾರ್ಥಿಗಳು ತಮ್ಮ ಶಾಲೆಗೆ ಅರ್ಜಿಯನ್ನು ನೀಡಬೇಕು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 080 44554455ಗೆ ಕರೆ ಮಾಡಿ ಅಥಾವ ಮಾನ್ವಿ ಸಮಾಜ ಕಲ್ಯಾಣ ಇಲಾಖೆಗೆ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದು ಎಂದು ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರಾದ ವಿಜಯಾ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಲಿಂಡರ್ ಗ್ಯಾಸ್ 9ರಿಂದ 4ಕ್ಕೆ ಇಳಿಕೆ: ಪೂಜಾರ ಖಂಡನೆ

ಹೇಳುತ್ತಿರುವುದು ನಾಚಿಕೆಗೇಡಿತನದ ಸಂಗತಿಯಾಗಿದೆ.ಪರೋಕ್ಷವಾಗಿ ಕೇಂದ್ರ ಸರ್ಕಾರ ಜನರ ಊಟದ ತಟ್ಟೆಗೆ ಕೈಹಾಕಿದ್ದು, ಉಪವಾಸ ಮಾಡಿ ಎಂದ ಹೇಳುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

''ಕೂಲಿ ಜಾಸ್ತಿ ಯಾಕೆ ಮಾಡಿಲ್ಲ ?'' ಕೇಂದ್ರ ಸರ್ಕಾರ 4 ಕಾರ್ಮಿಕ ಸಂಹಿತೆಗಳನ್ನು ಜಾರಿ ಮಾಡುವ ಮೂಲಕ ದೇಶದ ಎಲ್ಲ ದುಡಿಯುವ ಜನರ ಹೊಟ್ಟೆಯ ಮೇಲೆ ಬರೆ ಎಳೆದಿದೆ. ಹಣದುಬ್ಬರ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಅಗತ್ಯ ವಸ್ತುಗಳು ಗಗನಮುಖಿಯಾಗಿವೆ. ಇಂತಹ ಸಂದರ್ಭದಲ್ಲಿ ಪೆಟ್ರೋಲ್, ಡೀಸೆಲ್ ಹಾಗೂ ಅಡುಗೆ ಅನಿಲ ಬೆಲೆಯನ್ನು ಏರಿಸುವ ಮೂಲಕ ಕೇಂದ್ರ ಸರ್ಕಾರ ಜನಸಾಮಾನ್ಯರನ್ನು ಬೀದಿಗೆ ತಳ್ಳಿದೆ. ಮಧ್ಯಪ್ರಾಚ್ಯದ ಬಿಕ್ಕಟ್ಟಿನ ನೆಪವೊಡ್ಡಿ ಬೆಲೆ ಏರಿಕೆಯನ್ನು ಸಮರ್ಥನೆ ಮಾಡಿಕೊಳ್ಳುವ ಕೇಂದ್ರ ಸರ್ಕಾರ, ಕೂಲಿಯನ್ನು ಯಾಕೆ ಜಾಸ್ತಿ ಮಾಡಿಲ್ಲ ಎಂದು ಅವರು ಪ್ರಶ್ನಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಮೋದಿ 12- ಮರೆದದ್ದೇ ಸಾಧನೆ, ಸುಳ್ಳಾಡಿದ್ದೇ ದಾಖಲೆ

ಮೋದಿ, ಚುನಾವಣೆಗಳನ್ನು ಗೆಲ್ಲುತ್ತಿರಬಹುದು, ಅಧಿಕಾರದಲ್ಲಿ ಮುಂದುವರೆಯುತ್ತಿರಬಹುದು. ಆದರೆ, ಈ ದೇಶ ಕಂಡ ಮಹಾನ್ ನಾಯಕನಲ್ಲ, ರಾಜಕಾರಣಿಯಲ್ಲ, ಮುತ್ಸದ್ದಿಯಲ್ಲ- ಕೇವಲ ವ್ಯಾಪಾರಿ. ಇಂತಹ ವ್ಯಾಪಾರಿ 12 ವರ್ಷಗಳಲ್ಲ, 24 ವರ್ಷ ಅಧಿಕಾರದಲ್ಲಿದ್ದರೂ ನೆಹರೂ ಆಗುವುದು ಸಾಧ್ಯವಿಲ್ಲ. ಮೋದಿಯವರನ್ನು ದೇವರೆಂದು ಭ್ರಮಿಸುವವರಿಗೆ ಭಜನೆ ಬಿಟ್ಟರೆ ಬೇರೇನೂ ಸಿಗುವುದಿಲ್ಲ.

ಭಾರತದ ರಾಜಕೀಯ ಇತಿಹಾಸದಲ್ಲಿ ನಿರಂತರವಾಗಿ 12 ವರ್ಷಗಳ ಕಾಲ ಪ್ರಧಾನಿಯಾಗಿ ಅಧಿಕಾರದಲ್ಲಿರುವುದು ಅಪರೂಪದ ಸಾಧನೆ. 2014ರಲ್ಲಿ ಅಧಿಕಾರಕ್ಕೆ ಬಂದ ನರೇಂದ್ರ ಮೋದಿಯವರು ಜೂನ್ 10, 2026ಕ್ಕೆ ತಮ್ಮ ಆಡಳಿತದ ಹನ್ನೆರಡನೇ ವರ್ಷವನ್ನು ಪೂರ್ಣಗೊಳಿಸಿದ್ದಾರೆ. ಸ್ವತಂತ್ರ ಭಾರತದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರೂ 4,398 ದಿನಗಳ ಕಾಲ ಆಡಳಿತದಲ್ಲಿದ್ದರು. ಮೋದಿ ಆಡಳಿತಕ್ಕೆ ಬಂದು 4,399 ದಿನಗಳನ್ನು ಪೂರೈಸಿದ್ದಾರೆ. ಆ ಮೂಲಕ ನೆಹರೂರವರ ದಾಖಲೆಯನ್ನು ಮುರಿದು ಮುನ್ನುಗ್ಗುತ್ತಿದ್ದಾರೆ ಎಂದು ಕೇಂದ್ರ ಸರ್ಕಾರ, ಭಾರತೀಯ ಜನತಾ ಪಕ್ಷ ಮತ್ತು ಸಂಘಪರಿವಾರ ಸಂಭ್ರಮಿಸುತ್ತಿದೆ.

ಭಾರತೀಯ ಜನತಾ ಪಕ್ಷ ಮತ್ತು ಸಂಘಪರಿವಾರಕ್ಕೆ ಇದು ಸಂಭ್ರಮಿಸುವ ಸಮಾಚಾರವಾಗಿರಬಹುದು. ಆದರೆ, ದೇಶದ ಜನ ಸಂಭ್ರಮಿಸುವ ಸಂದರ್ಭ ಸೃಷ್ಟಿಯಾಗಿಲ್ಲ. ಏಕೆಂದರೆ, ಮೋದಿಯವರ 12 ವರ್ಷಗಳ ಆಡಳಿತದಿಂದ ದೇಶದಲ್ಲಾದ ಬದಲಾವಣೆಗಳೇನು ಎನ್ನುವುದರತ್ತ ಗಮನ ಹರಿಸಿದರೆ, ದುಗುಡ-ಖಿನ್ನತೆ ಆವರಿಸುತ್ತದೆ. ಆದರೂ ದೇಶದ ಮಾಧ್ಯಮಗಳು ಮೋದಿಯವರನ್ನು ನೆಹರೂ ಅವರ ದಾಖಲೆ ಮುರಿದರು, ನೆಹರೂ ಮಾಡದಿದ್ದುದನ್ನು ಮೋದಿ ಮಾಡಿದರು ಎಂದು ಕೊಂಡಾಡುತ್ತಿವೆ.

ಸ್ವತಂತ್ರ ಭಾರತದ ಮೊದಲ ಪ್ರಧಾನಿ ನೆಹರೂ ಕಾಲಘಟ್ಟದ ಭಾರತವೇ ಬೇರೆ, ಮೋದಿಯವರ ಕಾಲದ ಭಾರತವೇ ಬೇರೆ ಎನ್ನುವುದನ್ನು ನಾವು ಮೊದಲು ಅರ್ಥಮಾಡಿಕೊಳ್ಳಬೇಕು. ಆಮೇಲೆ, ಅಧಿಕಾರವೆಂಬ ಅಪೂರ್ವ ಅವಕಾಶವನ್ನು ದೇಶಕ್ಕಾಗಿ, ಜನಕ್ಕಾಗಿ ನೆಹರೂ ಬಳಸಿದ ಬಗೆಯನ್ನು ಬಗೆದು ನೋಡಬೇಕು. ಆಗ ನಿಜನಾಯಕ ಯಾರು ಎನ್ನುವುದು ತಿಳಿಯುತ್ತದೆ.

ಕುತೂಹಲಕರ ಸಂಗತಿ ಎಂದರೆ, ಪ್ರಭುತ್ವವನ್ನು ಪ್ರಶ್ನಿಸಬೇಕಾದ ದೇಶದ ಮಾಧ್ಯಮಗಳು ಮೋದಿಯ ಹಣ ಮತ್ತು ಅಧಿಕಾರಕ್ಕೆ ತಲೆಬಾಗಿವೆ. ಮಾರಿಕೊಂಡಿವೆ. ಮೋದಿ ಭಜನೆಯಲ್ಲಿ ನಿರತವಾಗಿವೆ. ಬೇರೆಯದೇ ಆದ ಚಿತ್ರಣವನ್ನು ದೇಶದ ಮುಂದಿಡುತ್ತಿವೆ. ವಿಚಿತ್ರವೆಂದರೆ, ದೇಶದ ಜನತೆ ಮೋದಿಯನ್ನು ಮೆಚ್ಚುವುದು, ಪರ ವಹಿಸಿ ಮಾತನಾಡುವುದು, ಲೀಟರ್ ಪೆಟ್ರೋಲ್‌ಗೆ 500 ರೂಪಾಯಿ ಆದರೂ ಕೊಡುತ್ತೇವೆ ಎನ್ನುವುದನ್ನೂ ಕಾಣುತ್ತಿದ್ದೇವೆ.



ಈ ಪರಿಯ ಭಕ್ತಿಗೆ ಕಾರಣವೂ ಇದೆ. ಭಾರತ ದೇವರುಗಳ ದೇಶ, ನಂಬಿಕೆಗಳ ನೆಲ. ದೇಶದ ಜನತೆ ಮೋದಿಯವರನ್ನು ದೇವರನ್ನಾಗಿ ನೋಡುತ್ತದೆ, ಬಲವಾಗಿ ನಂಬಿದೆ. ನಂಬಿಸುವಂತಹ ನಟನೆಯಲ್ಲಿ ಮೋದಿ ನೈಪುಣ್ಯತೆ ಪಡೆದಿದ್ದಾರೆ. ಮೊದಲಿಗೆ, ಅವರು ಒಬ್ಬಂಟಿಯಾಗಿರುವುದು, ಹೆಂಡತಿ-ಮನೆ-ಮಕ್ಕಳು ಇಲ್ಲದಿರುವುದು ಜನರ ನಂಬಿಕೆಗೆ ಬಲ ತುಂಬಿದೆ. ಅವರು ಎಲ್ಲ ರಾಜಕಾರಣಿಗಳಂತಲ್ಲ, ಭ್ರಷ್ಟರಲ್ಲ, ವಂಶ ಪಾರಂಪರ್ಯ ರಾಜಕಾರಣ ಮಾಡುವುದಿಲ್ಲ ಎನ್ನುವುದು ಅವರಿಗಿರುವ ಬಹಳ ದೊಡ್ಡ ಪ್ಲಸ್ ಪಾಯಿಂಟ್ ಆಗಿದೆ. ಮೋದಿ ಏನೇ ಮಾಡಿದರೂ, ದೇಶದ ಒಳಿತಿಗಾಗಿ ಎನ್ನುವವರಿದ್ದಾರೆ. ಮೋದಿ ಇಲ್ಲದಿದ್ದರೆ, ಇವತ್ತು ದೇಶ ಈ ಸ್ಥಿತಿಯಲ್ಲಿ ಇರುತ್ತಿರಲಿಲ್ಲ ಎಂದು ವಾದ ಮಾಡುವವರಿದ್ದಾರೆ. ಅಷ್ಟೇ ಅಲ್ಲ, ಮೋದಿ ತಪ್ಪು ಮಾಡಿದರೂ ಮನ್ನಿಸುವವರಿದ್ದಾರೆ. ತಪ್ಪನ್ನು ತಮ್ಮದು ಎಂದು ಭಾವಿಸಿ, ಸಮರ್ಥಿಸಿ ಮಾತನಾಡುವವರಿದ್ದಾರೆ.

ಇದೇ ಮೋದಿಯವರ ಬಹಳ ದೊಡ್ಡ ಆಸ್ತಿ. ಇದರ ಬಲದಿಂದ ತುಘಲಕ್‌ನನ್ನೂ ಮರೆಸುವ, ಮೀರಿಸುವ ದರ್ಬಾರು ನಡೆಸುತ್ತಿದ್ದಾರೆ. ಪ್ರಧಾನಿ ಕುರ್ಚಿ ಉಳಿಸಿಕೊಳ್ಳಲಿಕ್ಕಾಗಿ, ದೇಶವನ್ನೇ ಅಂಬಾನಿ-ಅದಾನಿಗಳಿಗೆ ಮಾರುತ್ತಿದ್ದಾರೆ. ಅವರಿಗೆ ಜಗತ್ತಿನ ಶ್ರೀಮಂತರ ಪಟ್ಟಿಯಲ್ಲಿ ಸ್ಥಾನ ಕಲ್ಪಿಸಿಕೊಟ್ಟಿದ್ದಾರೆ.

ವಿಪರ್ಯಾಸಕರ ಸಂಗತಿ ಎಂದರೆ, 2014ರಲ್ಲಿ ನರೇಂದ್ರ ಮೋದಿ ದೇಶದ ಪ್ರಧಾನಿಯಾದಾಗ- ಅಚ್ಚೇ ದಿನ್, ಭ್ರಷ್ಟಾಚಾರ ಮುಕ್ತ ಭಾರತ, ವರ್ಷಕ್ಕೆ ಎರಡು ಕೋಟಿ ಉದ್ಯೋಗ, ರೈತರ ಆದಾಯ ದ್ವಿಗುಣ, ಕಪ್ಪುಹಣ ವಾಪಸ್, ಕನಿಷ್ಠ ಸರ್ಕಾರ-ಗರಿಷ್ಠ ಆಡಳಿತ, ಅಭಿವೃದ್ಧಿಯ ಹೊಸ ಯುಗದ ಕನಸು ಬಿತ್ತಿ, ಜನರ ನಿರೀಕ್ಷೆಗಳನ್ನು ಆಕಾಶಕ್ಕೇರಿಸಿದ್ದರು. ಇಂದು, 12 ವರ್ಷಗಳ ಆಡಳಿತದ ನಂತರ, ಆ ಭರವಸೆಗಳು ಸುಳ್ಳುಗಳ ಲೆಕ್ಕಕ್ಕೆ ಜಮೆಯಾಗಿವೆ.

ಆ ಸುಳ್ಳನ್ನು ಮರೆಮಾಚಲು ಮೋದಿಯವರ ಬೆಂಬಲಿಗರು ಹೆದ್ದಾರಿಗಳು, ಡಿಜಿಟಲ್ ಪಾವತಿಗಳು, ಮೂಲಸೌಕರ್ಯ ಅಭಿವೃದ್ಧಿ, ವಿದೇಶಾಂಗ ಕ್ಷೇತ್ರದಲ್ಲಿನ ಭಾರತದ ಪ್ರಭಾವ, ಕೋವಿಡ್ ಲಸಿಕಾ ಕಾರ್ಯಕ್ರಮದಂತಹ ಸಾಧನೆಗಳನ್ನು ಉಲ್ಲೇಖಿಸುತ್ತಾರೆ. ಆದರೆ ಪ್ರಜಾಪ್ರಭುತ್ವದಲ್ಲಿ ಯಾವುದೇ ಸರ್ಕಾರದ ಮೌಲ್ಯಮಾಪನ ಕೇವಲ ಪ್ರಚಾರದ ಆಧಾರದ ಮೇಲೆ ಆಗುವುದಿಲ್ಲ. ಅದು ಜನರ ಬದುಕಿನ ವಾಸ್ತವ ಸ್ಥಿತಿಗತಿಗಳ ಆಧಾರದ ಮೇಲೆ ಆಗಬೇಕು.

ಉದ್ಯೋಗ ಸೃಷ್ಟಿಯೇ ಮೋದಿ ಸರ್ಕಾರದ ಅತಿದೊಡ್ಡ ಭರವಸೆ. ಆದರೆ 12 ವರ್ಷಗಳ ನಂತರವೂ ನಿರುದ್ಯೋಗ ಸಮಸ್ಯೆ ನಿವಾರಣೆಯಾಗಲಿಲ್ಲ. ಲಕ್ಷಾಂತರ ಯುವಕರು ಸರ್ಕಾರಿ ಉದ್ಯೋಗ ಪರೀಕ್ಷೆಗಳಿಗಾಗಿ ವರ್ಷಗಟ್ಟಲೆ ಕಾಯುತ್ತಿದ್ದಾರೆ. ಪದವೀಧರರು ಸಣ್ಣಪುಟ್ಟ ಉದ್ಯೋಗಗಳಿಗೆ ಮೈಲುಗಟ್ಟಲೆ ಕ್ಯೂ ನಿಂತು ಅರ್ಜಿ ಸಲ್ಲಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಆ ಸಮಸ್ಯೆ ಇವತ್ತಿಗೂ ಪರಿಹಾರ ಕಾಣದಾಗಿದೆ.

2016ರ ನೋಟು ಅಮಾನ್ಯೀಕರಣವನ್ನು ಭ್ರಷ್ಟಾಚಾರ ಮತ್ತು ಕಪ್ಪುಹಣದ ವಿರುದ್ಧದ ಐತಿಹಾಸಿಕ ಕ್ರಮ ಎಂದರು. ತಡೆಯಲಾಗಲಿಲ್ಲ, ಭ್ರಷ್ಟಾಚಾರವನ್ನೂ ನಿಯಂತ್ರಿಸಲಾಗಲಿಲ್ಲ. ಇದರಿಂದ ಸಣ್ಣ ವ್ಯಾಪಾರಿಗಳು, ದಿನಗೂಲಿ ಕಾರ್ಮಿಕರು ಮತ್ತು ಅಸಂಘಟಿತ ವಲಯದ ಆರ್ಥಿಕತೆ ದೊಡ್ಡ ಹೊಡೆತಕ್ಕೆ ಸಿಲುಕಿತು. [illegible] ಆದರೆ ಬಿಜೆಪಿ ಭ್ರಷ್ಟರಿಗೆ ರೆಡ್ ಕಾರ್ಪೆಟ್ ಹಾಸಿ ಬರಮಾಡಿಕೊಂಡಿತು. [illegible]

ರೈತರ ಆದಾಯ ದ್ವಿಗುಣಗೊಳಿಸುವ ಭರವಸೆಗಳತ್ತರು. ಆದರೆ ಕೃಷಿ ವೆಚ್ಚಗಳ ಏರಿಕೆ ತಡೆಯಲಾಗಲಿಲ್ಲ. ಇದರ ನಡುವೆಯೇ ಮೂರು ಕರಾಳ ಕೃಷಿ ಕಾಯ್ದೆಗಳನ್ನು ಜಾರಿಗೆ ತರಲು ಹವಣಿಸಿದರು. ರೈತರು ಪ್ರತಿಭಟನೆಗಿಳಿದಾಗ ಅವರನ್ನು ಭಯೋತ್ಪಾದಕರೆಂದು ದೂರಿದರು. ಏಳುನೂರಕ್ಕೂ ಹೆಚ್ಚು ರೈತರು ಸಾವಿಗೀಡಾದಾಗ, ತಿರುಗಿಯೂ ನೋಡದಾದರು. ಕೊನೆಗೆ ಕೃಷಿ ಕಾಯ್ದೆಗಳನ್ನು ಹಿಂಪಡೆಯಬೇಕಾಯಿತು. ಇದು ಹಳ್ಳ ಹಿಡಿದ ಆಡಳಿತದ ಸಂಕೇತದಂತೆ ಕಾಣತೊಡಗಿತು.

ಬೆಲೆ ಏರಿಕೆಯಂತೂ ಸಾಮಾನ್ಯ ಜನರ ಬದುಕನ್ನು ನರಕವನ್ನಾಗಿಸಿದೆ. ಅಡುಗೆ ಅನಿಲ, ಆಹಾರ ಪದಾರ್ಥಗಳು, ಶಿಕ್ಷಣ, ಆರೋಗ್ಯ ಮತ್ತು ಮನೆ ನಿರ್ವಹಣೆಯ ವೆಚ್ಚಗಳು ನಿರಂತರವಾಗಿ ಏರುತ್ತಿವೆ. ದುರದೃಷ್ಟಕರ ಸಂಗತಿ ಎಂದರೆ, ಜನರು ಎದುರಿಸುತ್ತಿರುವ ಆರ್ಥಿಕ ಸಂಕಷ್ಟಕ್ಕಿಂತ ಸರ್ಕಾರದ ಸಮಜಾಯಿಷಿಯೇ ಪ್ರಚಾರ ಪಡೆಯುತ್ತಿದೆ.

ಮೋದಿ ಆಡಳಿತದ ಮತ್ತೊಂದು ಅಧ್ವಾನವೆಂದರೆ, ಮೋದಿ ಕೇಂದ್ರಿತ ದರ್ಬಾರು. ಸರ್ಕಾರದ ಪ್ರತಿಯೊಂದು ಯೋಜನೆಯೂ ಪ್ರಧಾನಿಯ ಹೆಸರಿನೊಂದಿಗೆ ಗುರುತಿಸಿಕೊಳ್ಳುವ, ಪ್ರಚಾರ ಪಡೆಯುವ, ಮಿಕ್ಕ ಮಂತ್ರಿಗಳನ್ನು ಇದ್ದೂ ಇಲ್ಲವಾಗಿಸುವ ಪ್ರಯತ್ನ- ಸರ್ವಾಧಿಕಾರಿಯನ್ನು ನೆನಪಿಸುತ್ತಿದೆ. ಚುನಾವಣೆಗಳನ್ನು ನಿರಂತರವಾಗಿ ಗೆಲ್ಲುತ್ತಿರುವುದು ಅಹಂಕಾರಕ್ಕೆ ಹಾದಿ ಮಾಡಿಕೊಟ್ಟಿದೆ. ಇದು ವ್ಯಕ್ತಿಪೂಜೆಗೆ ಹೆಚ್ಚಿನ ಆದ್ಯತೆ ನೀಡಿ ಪ್ರಜಾಪ್ರಭುತ್ವದ ಆಶಯವನ್ನು ಮಣ್ಣುಗೂಡಿಸಿದೆ.

ಇನ್ನು ಸರ್ಕಾರಿ ಸ್ವಾಯತ್ತ ತನಿಖಾ ಸಂಸ್ಥೆಗಳ ದುರ್ಬಳಕೆ- ವಿರೋಧಿಗಳನ್ನು ಬಗ್ಗುಬಡಿಯಲು ಅಸ್ತ್ರದಂತೆ ಬಳಸಿದ್ದು, ಚುನಾವಣಾ ಬಾಂಡ್ ಮೂಲಕ ಅತಿ ಹೆಚ್ಚು ಹಣ ಸಂಗ್ರಹಿಸಿದ್ದು, ಭ್ರಷ್ಟರನ್ನು ಸೆಳೆದು ವಾಷಿಂಗ್ ಮಷೀನ್ ಪಕ್ಷ ಎನಿಸಿಕೊಂಡಿದ್ದು, ಭಿನ್ನ ದನಿಗಳನ್ನು ಯುಎಪಿಎ ಕಾಯ್ದೆಗಳ ಮೂಲಕ ಬಗ್ಗುಬಡಿದದ್ದು, ಸರ್ಕಾರವನ್ನು ಟೀಕಿಸುವವರನ್ನು ದೇಶದ್ರೋಹಿಗಳೆಂದು ಬ್ರ್ಯಾಂಡ್ ಮಾಡಿದ್ದು, ಪವಿತ್ರವಾದ ನ್ಯಾಯಾಂಗ ವ್ಯವಸ್ಥೆಯನ್ನು ಭ್ರಷ್ಟಗೊಳಿಸಿದ್ದು- ಮೋದಿಯ ಮಹಾನ್ ಸಾಧನೆ ಎಂದೇ ಹೇಳಬೇಕಿದೆ.

ಹೀಗಾಗಿ ಮೋದಿ, ಚುನಾವಣೆಗಳನ್ನು ಗೆಲ್ಲುತ್ತಿರಬಹುದು, ಅಧಿಕಾರದಲ್ಲಿ ಮುಂದುವರೆಯುತ್ತಿರಬಹುದು. ಆದರೆ, ಈ ದೇಶ ಕಂಡ ಮಹಾನ್ ನಾಯಕನಲ್ಲ, ರಾಜಕಾರಣಿಯಲ್ಲ, ಮುತ್ಸದ್ದಿಯಲ್ಲ- ಕೇವಲ ವ್ಯಾಪಾರಿ. ಇಂತಹ ವ್ಯಾಪಾರಿ 12 ವರ್ಷಗಳಲ್ಲ, 24 ವರ್ಷ ಅಧಿಕಾರದಲ್ಲಿದ್ದರೂ ನೆಹರೂ ಆಗುವುದು ಸಾಧ್ಯವಿಲ್ಲ. ಮೋದಿಯವರನ್ನು ದೇವರೆಂದು ಭ್ರಮಿಸುವವರಿಗೆ ಭಜನೆ ಬಿಟ್ಟರೆ ಬೇರೇನೂ ಸಿಗುವುದಿಲ್ಲ.

ಅಧಿಕಾರಾವಧಿಯಲ್ಲಿ ನೆಹರೂ ದಾಖಲೆ ಮುರಿದ ಪಿಎಂ ಮೋದಿ: ದೇಶದ ಪ್ರಗತಿಯೋ, ಹಿನ್ನಡೆಯೋ?

ದೇಶದ ಜಿಡಿಪಿ ಬೆಳೆಯುತ್ತಿದೆ. ಇದನ್ನೇ ಕೇಂದ್ರ ಸರ್ಕಾರ ಮೋದಿ ಆಡಳಿತದಲ್ಲಿ ಆರ್ಥಿಕ ಪ್ರಗತಿ ಎಂದು ಸಾರುತ್ತಿದೆ. ಆದರೆ ಇದೇ ಸಂದರ್ಭದಲ್ಲಿ ಶ್ರೀಮಂತರು ಮತ್ತು ಬಡವರ ನಡುವಿನ ಕಂದಕ ಹಿಂದೆಂದಿಗಿಂತಲೂ ಹೆಚ್ಚಾಗಿದೆ ಎಂಬುದು ವಾಸ್ತವ. ನೆಹರೂ ಅವರು ಸಂಪತ್ತಿನ ವಿಕೇಂದ್ರೀಕರಣಕ್ಕೆ ಒತ್ತು ನೀಡಿದ್ದರು. ಆದರೆ ಇಂದು ದೇಶದ ಬಹುಪಾಲು ಸಂಪತ್ತು ಕೆಲವೇ ಕೆಲವು ಕಾರ್ಪೊರೇಟ್ ಉದ್ಯಮಿಗಳ ಕೈಯಲ್ಲಿದೆ.

ದೇಶದ ರಾಜಕೀಯ ಇತಿಹಾಸದಲ್ಲಿ ಸುದೀರ್ಘಾವಧಿ ಪ್ರಧಾನಮಂತ್ರಿಯಾಗಿ ಸೇವೆ ಸಲ್ಲಿಸಿದ ದಾಖಲೆ ಜವಾಹರಲಾಲ್ ನೆಹರೂ ಅವರ ಹೆಸರಿನಲ್ಲಿದೆ. ಅಂದರೆ ಒಟ್ಟು 6,130 ದಿನಗಳು. ಆದರೆ ಚುನಾಯಿತ ಸಂಸತ್ತಿನ ಅಡಿಯಲ್ಲಿ ನಿರಂತರವಾಗಿ ಆಡಳಿತ ನಡೆಸಿದ ದಿನಗಳ ಆಧಾರದಲ್ಲಿ ನೆಹರೂ ಅಧಿಕಾರಾವಧಿ ಸುಮಾರು 4,398 ದಿನಗಳು. ಈ ದಾಖಲೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮುರಿದಿದ್ದಾರೆ. ಪ್ರಧಾನಿ ಮೋದಿ ಜೂನ್ 10ರ ವೇಳೆಗೆ 4,399 ದಿನಗಳ ಅಧಿಕಾರಾವಧಿ ಪೂರೈಸಿದ್ದಾರೆ. ಮೋದಿ, ನೆಹರೂ ದಾಖಲೆ ಮುರಿದಿದ್ದರೂ ನೆಹರೂ ಕಾಲದ ಮೌಲ್ಯಗಳು ಮತ್ತು ಸಾಧನೆಗಳಿಗಿಂತ ದೇಶವನ್ನು ಹಿಂದೆ ತಳ್ಳಿದ್ದಾರೆ.

ಕಾಲಾವಧಿಯ ಆಚೆಗೆ ಇಬ್ಬರೂ ನಾಯಕರ ಆಡಳಿತಾವಧಿ, ಎದುರಿಸಿದ ಸವಾಲುಗಳು, ಸಾಧನೆಗಳನ್ನು ನೋಡಿದಾಗ ಇಂದಿಗೂ ನೆಹರೂ ಸಮಕ್ಕೆ ಬಂದು ನಿಲ್ಲುವ ಸ್ಥಾನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಲ್ಲ. ಆಡಳಿತ ನಡೆಸಿದ ಕಾಲಘಟ್ಟ ಸಂಪೂರ್ಣವಾಗಿ ಭಿನ್ನವಲ್ಲವೇ, ಹಾಗಿರುವಾಗ ಹೋಲಿಕೆ ಸಲ್ಲ ಎನ್ನಬಹುದು ನೀವು. ಆದರೆ ಆಯಾ ಕಾಲದ ಸವಾಲುಗಳನ್ನು ಉಭಯ ನಾಯಕರು ಹೇಗೆ ನಿಭಾಯಿಸಿದ್ದಾರೆ, ದೇಶವನ್ನು ಯಾವೆಲ್ಲ ಮೌಲ್ಯಗಳ ಆಧಾರದಲ್ಲಿ ಮುನ್ನಡೆಸಿದ್ದಾರೆ ಎಂಬ ಮಾನದಂಡ ಮುಂದಿಡಲೇ ಬೇಕಾಗುತ್ತದೆ.


ಜವಾಹರಲಾಲ್ ನೆಹರೂ ಕಾಲಾವಧಿ: ಶೂನ್ಯದಿಂದ ಸೃಷ್ಟಿಯ ಸವಾಲು

ನೆಹರೂ ಅವರು ಅಧಿಕಾರ ವಹಿಸಿಕೊಂಡಾಗ ದೇಶವು ಬ್ರಿಟಿಷರ ಆಡಳಿತದಿಂದ ಜರ್ಜರಿತವಾಗಿತ್ತು. ವಿಭಜನೆಯ ನೋವನ್ನು ಉಣ್ಣುತ್ತಿತ್ತು ಮತ್ತು ಅತ್ಯಂತ ಬಡತನದಲ್ಲಿತ್ತು. ದೇಶದ ವಿಭಜನೆಯಿಂದ ಉಂಟಾದ ಕೋಮು ದಂಗೆಗಳು, ಲಕ್ಷಾಂತರ ನಿರಾಶ್ರಿತರ ಪುನರ್ವಸತಿ ಮತ್ತು 500ಕ್ಕೂ ಹೆಚ್ಚು ರಾಜಸಂಸ್ಥಾನಗಳನ್ನು ದೇಶದ ಒಕ್ಕೂಟಕ್ಕೆ ಸೇರಿಸುವ ಬೃಹತ್ ಸವಾಲನ್ನು ಎದುರಿಸಿದವರು ನೆಹರೂ. ದೇಶದಲ್ಲಿ ತೀವ್ರ ಆಹಾರದ ಕೊರತೆಯಿತ್ತು. ಸಾಕ್ಷರತೆ ಮತ್ತು ಸರಾಸರಿ ಜೀವಿತಾವಧಿ ಅತ್ಯಂತ ಕಡಿಮೆಯಿತ್ತು. ಈ ಸಂಕೀರ್ಣ ಪರಿಸ್ಥಿತಿಯಲ್ಲೂ ನೆಹರೂ ಅವರು ಪ್ರಜಾಪ್ರಭುತ್ವದ ಹಾದಿಯನ್ನು ಬಿಡಲಿಲ್ಲ.

ಡಾ. ಬಿ.ಆರ್. ಅಂಬೇಡ್ಕರ್ ಅವರ ನೇತೃತ್ವದಲ್ಲಿ ಸಿದ್ಧವಾದ ಸಂವಿಧಾನವನ್ನು ಜಾರಿಗೆ ತಂದು, ದೇಶವನ್ನು ಸಾರ್ವಭೌಮ, ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ ರೂಪಿಸಿದರು. ದೇಶದಲ್ಲಿ ಶೇ. 80ಕ್ಕಿಂತ ಹೆಚ್ಚು ನಿರಕ್ಷರತೆ ಇದ್ದ ಕಾಲದಲ್ಲೂ, ವಯಸ್ಕ ಮತದಾನ ಪದ್ಧತಿಯ ಮೂಲಕ ಯಶಸ್ವಿಯಾಗಿ ಚುನಾವಣೆ ನಡೆಸಿ, ಜಗತ್ತೇ ಭಾರತದತ್ತ ಆಶ್ಚರ್ಯದಿಂದ ನೋಡುವಂತೆ ಮಾಡಿದರು.

ಬ್ರಿಟಿಷರು ಬಿಟ್ಟು ಹೋಗಿದ್ದ ದಿವಾಳಿ ಆರ್ಥಿಕತೆಯನ್ನು ಹಳಿಗೆ ತರಲು ಅವರು ಮಿಶ್ರ ಆರ್ಥಿಕ ನೀತಿಯನ್ನು ( ) ಅಳವಡಿಸಿಕೊಂಡರು. ದೇಶದ ಸಂಪನ್ಮೂಲಗಳ ವ್ಯವಸ್ಥಿತ ಬಳಕೆಗೆ ಯೋಜನಾ ಆಯೋಗವನ್ನು ಸ್ಥಾಪಿಸಿದರು. ಮೊದಲ ಪಂಚವಾರ್ಷಿಕ ಯೋಜನೆ ಮೂಲಕ ಕೃಷಿ ವಲಯಕ್ಕೆ ಆದ್ಯತೆ ನೀಡಿ, ದೇಶದ ಆಹಾರ ಭದ್ರತೆಗೆ ಒತ್ತು ನೀಡಿದರು. ಎರಡನೇ ಪಂಚವಾರ್ಷಿಕ ಯೋಜನೆ ಅಡಿಯಲ್ಲಿ ಮಹಲನೋಬಿಸ್ ಮಾದರಿಯಲ್ಲಿ ಭಾರಿ ಕೈಗಾರಿಕೆಗಳ ಸ್ಥಾಪನೆಗೆ ಒತ್ತು ನೀಡಿದರು.

ಭಾಕ್ರಾ-ನಂಗಲ್, ದಾಮೋದರ್ ವ್ಯಾಲಿ, ಮತ್ತು ಹೀರಾಕುಡ್ ನಂತಹ ಬೃಹತ್ ಅಣೆಕಟ್ಟುಗಳನ್ನು ನಿರ್ಮಿಸುವ ಮೂಲಕ ಕೃಷಿ ಮತ್ತು ವಿದ್ಯುತ್ ಉತ್ಪಾದನೆಗೆ ಕ್ರಾಂತಿಕಾರಿ ಮುನ್ನುಡಿ ಬರೆದರು. ಭಿಲಾಯ್, ರೂರ್ಕೆಲಾ ಮತ್ತು ದುರ್ಗಾಪುರಗಳಲ್ಲಿ ಜಾಗತಿಕ ಮಟ್ಟದ ಉಕ್ಕು ಕಾರ್ಖಾನೆಗಳನ್ನು ಸ್ಥಾಪಿಸಲಾಯಿತು. ಬಿಇಎಲ್, ಬಿಎಚ್‌ಇಎಲ್, ಮತ್ತು ಎಚ್‌ಎಂಟಿನಂತಹ ಸಾರ್ವಜನಿಕ ವಲಯದ ಉದ್ಯಮಗಳನ್ನು () ಆರಂಭಿಸಿ ಸ್ವಾವಲಂಬನೆಗೆ ದಾರಿಯಿಟ್ಟರು. ನೆಹರೂ ಅವರ ಕಾಲದಲ್ಲಿ , , (ಆಗಿನ), ಮತ್ತು ನಂತಹ ಪ್ರಮುಖ ಸಂಸ್ಥೆಗಳಿಗೆ ಬುನಾದಿ ಹಾಕಲಾಯಿತು.



ದ್ವಿತೀಯ ಮಹಾಯುದ್ಧದ ನಂತರ ಜಗತ್ತು ಅಮೆರಿಕ ಮತ್ತು ರಷ್ಯಾ ಬಣಗಳಾಗಿ ವಿಭಜನೆಯಾಗಿದ್ದಾಗ, ದೇಶವು ಯಾವುದೇ ಬಣಕ್ಕೆ ಸೇರದೆ ಸ್ವತಂತ್ರ ವಿದೇಶಾಂಗ ನೀತಿಯನ್ನು ಹೊಂದಿರಬೇಕೆಂದು ನೆಹರೂ ಬಯಸಿದರು. ಅವರು ಜಾರಿಗೆ ತಂದ ಪಂಚಶೀಲ ತತ್ವಗಳು ಮತ್ತು ಅಲಿಪ್ತ ನೀತಿಯು ಹೊಸದಾಗಿ ಸ್ವಾತಂತ್ರ್ಯ ಪಡೆದ ಇತರ ದೇಶಗಳಿಗೆ ಮಾದರಿಯಾಯಿತು ಮತ್ತು ಜಾಗತಿಕ ಮಟ್ಟದಲ್ಲಿ ಭಾರತಕ್ಕೆ ಗೌರವಾನ್ವಿತ ಸ್ಥಾನವನ್ನು ತಂದುಕೊಟ್ಟಿತು.

ಮೋದಿ ಅವಧಿಯಲ್ಲಿ ಡಿಜಿಟಲ್ ಆದರೆ ಸಾಕೇ?

ನರೇಂದ್ರ ಮೋದಿ ಅವರು ಅಧಿಕಾರಕ್ಕೆ ಬಂದಾಗ ಭಾರತವು ಈಗಾಗಲೇ ಆರ್ಥಿಕವಾಗಿ ಮತ್ತು ತಾಂತ್ರಿಕವಾಗಿ ಒಂದು ಮಟ್ಟದ ಸ್ಥಿರತೆಯನ್ನು ಸಾಧಿಸಿತ್ತು. ಆದರೆ ವ್ಯವಸ್ಥೆಯ ಸುಧಾರಣೆ ಮತ್ತು ಜಾಗತಿಕ ಸ್ಪರ್ಧೆ ಅವರ ನರೇಂದ್ರ ಮೋದಿ ಮುಂದಿದ್ದ ಸವಾಲು. ಇವೆಲ್ಲವುದರ ನಡುವೆ ಡಿಜಿಟಲ್ ಕ್ರಾಂತಿ ಮುನ್ನಡೆ ಬರೆಯುವುದಾಗಿ ರಂಗು ರಂಗಿನ ಮಾತುಗಳನ್ನು ಆಡಿದವರು ಪ್ರಧಾನಿ ನರೇಂದ್ರ ಮೋದಿ. ಯುಪಿಐ ತಂತ್ರಜ್ಞಾನದ ಮೂಲಕ ದೇಶವು ಜಾಗತಿಕ ಡಿಜಿಟಲ್ ಪಾವತಿಯಲ್ಲಿ ನಂ.1 ಸ್ಥಾನದಲ್ಲಿದೆ. ಆರ್ಥಿಕವಾಗಿ ದೇಶ ಮುನ್ನಡೆಯುತ್ತಿದೆ ಎಂದು ಮೋದಿ ಸರ್ಕಾರ ಹೇಳಿದರೂ ವಾಸ್ತವ ಬೇರೆಯೇ. ಎಲ್ಲ ವಸ್ತುಗಳ ಬೆಲೆ ಮೋದಿ ಅವಧಿಯಲ್ಲಿ ಗಗನಕ್ಕೇರಿದೆ.

ಮುಖ್ಯವಾಗಿ ಪ್ರಜಾಪ್ರಭುತ್ವ ಸಂಸ್ಥೆಗಳ ದುರ್ಬಳಕೆಯಾಗುತ್ತಿದೆ ಎಂಬ ಆರೋಪವನ್ನು ನಾವು ಅಲ್ಲಗಳೆಯಲಾಗದು. ನೆಹರೂ ಅವರು ಸಂಸತ್ತು, ನ್ಯಾಯಾಂಗ ಮತ್ತು ಮಾಧ್ಯಮಗಳ ಸ್ವಾಯತ್ತತೆಗೆ ಅಪಾರ ಗೌರವ ನೀಡುತ್ತಿದ್ದರು. ಆದರೆ ಇಂದು ಸಿಬಿಐ, ಇಡಿ ಮತ್ತು ಚುನಾವಣಾ ಆಯೋಗದಂತಹ ಸಾಂಸ್ಥಿಕ ವ್ಯವಸ್ಥೆಗಳು ರಾಜಕೀಯ ಪ್ರಭಾವಕ್ಕೆ ಒಳಗಾಗಿವೆ. ವಿರೋಧ ಪಕ್ಷಗಳನ್ನು ಹತ್ತಿಕ್ಕಲು ಬಳಕೆಯಾಗುತ್ತಿವೆ. ಬಿಜೆಪಿಯ ವಾಷಿಂಗ್ ಮೆಷಿನ್‌ನಲ್ಲಿ ವಾಷ್ ಆದರಷ್ಟೇ ಸಿಬಿಐ, ಇಡಿ ದಾಳಿಯಿಂದ ತಪ್ಪಿಸಿಕೊಳ್ಳಲು ಸಾಧ್ಯ ಎಂಬಂತಹ ಸ್ಥಿತಿಯಿದೆ. ಇನ್ನು ನೆಹರೂ ಅವರ ಭಾರತದ ಪರಿಕಲ್ಪನೆ ವಿವಿಧತೆಯಲ್ಲಿ ಏಕತೆಯನ್ನು ಆಧರಿಸಿತ್ತು. ಆದರೆ ಮೋದಿ ಕಾಲದಲ್ಲಿ ರಾಜಕೀಯದಲ್ಲಿ ಧ್ರುವೀಕರಣ ಹೆಚ್ಚಾಗಿದೆ. ಅಲ್ಪಸಂಖ್ಯಾತರಲ್ಲಿ ಅಭದ್ರತೆಯ ಭಾವನೆ ಮೂಡಿದೆ. ದೇಶದ ಮೂಲ ಆಶಯವಾದ ಜಾತ್ಯತೀತತೆಗೆ ಧಕ್ಕೆಯುಂಟಾಗಿದೆ.

ಇನ್ನೊಂದೆಡೆ ದೇಶದ ಜಿಡಿಪಿ ಬೆಳೆಯುತ್ತಿದೆ. ಇದನ್ನೇ ಕೇಂದ್ರ ಸರ್ಕಾರ ಮೋದಿ ಆಡಳಿತದಲ್ಲಿ ಆರ್ಥಿಕ ಪ್ರಗತಿ ಎಂದು ಸಾರುತ್ತಿದೆ. ಆದರೆ ಇದೇ ಸಂದರ್ಭದಲ್ಲಿ ಶ್ರೀಮಂತರು ಮತ್ತು ಬಡವರ ನಡುವಿನ ಕಂದಕ ಹಿಂದೆಂದಿಗಿಂತಲೂ ಹೆಚ್ಚಾಗಿದೆ ಎಂಬುದು ವಾಸ್ತವ. ನೆಹರೂ ಅವರು ಸಂಪತ್ತಿನ ವಿಕೇಂದ್ರೀಕರಣಕ್ಕೆ ಒತ್ತು ನೀಡಿದ್ದರು. ಆದರೆ ಇಂದು ದೇಶದ ಬಹುಪಾಲು ಸಂಪತ್ತು ಕೆಲವೇ ಕೆಲವು ಕಾರ್ಪೊರೇಟ್ ಉದ್ಯಮಿಗಳ ಕೈಯಲ್ಲಿದೆ ಎಂದು ಹಲವು ಆರ್ಥಿಕ ವಿಶ್ಲೇಷಣೆಗಳು ಹೇಳುತ್ತವೆ. ನೆಹರೂ ಕಾಲದಲ್ಲಿ ಅಭಿವ್ಯಕ್ತಿ ಸ್ವಾತಂತ್ರ್ಯ ಮತ್ತು ಭಿನ್ನಾಭಿಪ್ರಾಯಕ್ಕೆ ಹೆಚ್ಚಿನ ಮಾನ್ಯತೆಯಿತ್ತು. ಇಂದು ಸರ್ಕಾರದ ನೀತಿಗಳನ್ನು ಟೀಕಿಸುವವರನ್ನು ''ದೇಶದ್ರೋಹಿಗಳು'' ಎಂದು ಬಿಂಬಿಸುವ ಪ್ರವೃತ್ತಿ ಹೆಚ್ಚಾಗಿದೆ, ಇದು ಪ್ರಜಾಪ್ರಭುತ್ವದ ಹಿನ್ನಡೆ.

ನೆಹರೂ ಅವರು ಸಮಾಜವಾದಿ ಪ್ರೇರಿತ, ಮಿಶ್ರ ಆರ್ಥಿಕತೆ ಮತ್ತು ಸರ್ಕಾರಿ ಸ್ವಾಮ್ಯದ ಉದ್ಯಮಗಳಿಗೆ ಒತ್ತು ನೀಡಿದವರು. ಆದರೆ ಪ್ರಧಾನಿ ಮೋದಿ ಬಂಡವಾಳಶಾಹಿ ಸ್ನೇಹಿ. ಅಂಬಾನಿ, ಅದಾನಿಗಳ ಜೇಬು ತುಂಬಿಸುವವರು. ಖಾಸಗೀಕರಣ ಮಾಡಿ ಸದ್ಯ ಏಕಸ್ವಾಮ್ಯದ ಸೃಷ್ಟಿಗೆ ಅವಕಾಶ ಮಾಡಿಕೊಡುತ್ತಿದ್ದಾರೆ. ಸರ್ಕಾರಿ ಸ್ವಾಮ್ಯದ ಬಿಇಎಲ್, ಬಿಎಚ್‌ಇಎಲ್, ಮತ್ತು ಎಚ್‌ಎಂಟಿನಲ್ಲಿ ಗುತ್ತಿಗೆದಾರರನ್ನು ನೇಮಿಸಿಕೊಂಡು ಸರ್ಕಾರಿ ಹುದ್ದೆಗಳನ್ನು ಕಡಿತಗೊಳಿಸುತ್ತಿದ್ದಾರೆ.

ಇನ್ನು ನೆಹರೂ ಅವರು ಭಾರತದ ಪ್ರಜಾಪ್ರಭುತ್ವದ ಅಡಿಪಾಯವನ್ನು ನಿರ್ಮಿಸಿದ ಶಿಲ್ಪಿ. ಆದರೆ ಪ್ರಧಾನಿ ನರೇಂದ್ರ ಮೋದಿ ಈ ಅಡಿಪಾಯ ನಡುಗುವಂತೆ ಮಾಡಿರುವ ನಾಯಕ. ಮೋದಿ ಆಡಳಿತವು ದೇಶದ ಸಾಮಾಜಿಕ ಸಾಮರಸ್ಯ, ಮಾಧ್ಯಮ ಸ್ವಾತಂತ್ರ್ಯ ಮತ್ತು ಪ್ರಜಾಪ್ರಭುತ್ವದ ಗುಣಮಟ್ಟದ ವಿಷಯದಲ್ಲಿ ದೇಶ ಹಿಂದೆ ಸರಿಯುವಂತೆ ಮಾಡಿದೆ.

ಒಬ್ಬ ನಾಗರಿಕನಾಗಿ ದೇಶದ ಪ್ರಗತಿಯನ್ನು ಕೇವಲ ರಸ್ತೆ-ಕಟ್ಟಡಗಳಿಂದ ಅಳೆಯಲಾಗದು. ಜನರ ನಡುವಿನ ಸಾಮರಸ್ಯವೂ ಮುಖ್ಯ. ಅಷ್ಟಕ್ಕೂ ಮೋದಿ ಅವಧಿಯ ರಸ್ತೆಗಳ ಸ್ಥಿತಿ ಹೇಗಿದೆ ಎಂಬುದಕ್ಕೆ ಗಂಗಾ ಎಕ್ಸ್ ಪ್ರೆಸ್‌ವೇ ಉತ್ತಮ ಉದಾಹರಣೆ. ಏಪ್ರಿಲ್ 29 ಪ್ರಧಾನಿ ಉದ್ಘಾಟಿಸಿದ ಈ ರಸ್ತೆಯಲ್ಲಿ ತಿಂಗಳು ಕಳೆಯುವಷ್ಟರಲ್ಲಿ ದೊಡ್ಡದಾದ ಬಿರುಕುಗಳು ಕಾಣಿಸಿಕೊಂಡಿವೆ. ಇದಕ್ಕೂ ಮುನ್ನ ಪ್ರಧಾನಿಯವರು ಉದ್ಘಾಟಿಸಿದ್ದ ಮುಂಬೈನ ಅಟಲ್ ಸೇತು ಮತ್ತು ಉತ್ತರ ಪ್ರದೇಶದ ಬುಂದೇಲ್‌ಖಂಡ್ ಎಕ್ಸ್ ಪ್ರೆಸ್‌ವೇ ರಸ್ತೆಗಳ ಸಂಪರ್ಕ ಮಾರ್ಗಗಳಲ್ಲೂ ಬಿರುಕು ಕಾಣಿಸಿಕೊಂಡಿತ್ತು. ಸರ್ಕಾರ ತಮ್ಮ ದುರಾಡಳಿತ ಬಹಿರಂಗವಾಗುತ್ತಿದ್ದಂತೆ ಕೋಮು ತೇಪೆ ಎಳೆಯುವಂತೆ, ಈ ಬಿರುಕುಗಳಿಗೂ ತೇಪೆ ಎಳೆದು ಮುಚ್ಚಿಹಾಕಿವೆ. ಈ ಕಳಪೆ ಕಾಮಗಾರಿಯ ರಸ್ತೆ ಇನ್ನೆಂದು ಕುಸಿಯುವುದೋ?

ಸರ್ಕಾರಗಳ ದಿವ್ಯ ನಿರ್ಲಕ್ಷ್ಯ : ಪಾಳುಬಿದ್ದ ಐತಿಹಾಸಿಕ ಮುದಗಲ್ ಕೋಟೆ!

ಭವ್ಯವಾದ ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯ ಅಚ್ಚಳಿಯದ ಕುರುಹಾಗಿ ಇಂದಿಗೂ ನಿಂತಿದೆ ಈ ಮುದಗಲ್ ಕೋಟೆ. ಈ ವೈಭವೋಪೇತ ಇತಿಹಾಸವನ್ನು ಹೊಂದಿರುವ, ಹಿಂದೂ-ಮುಸ್ಲಿಮರ ಭಾವನಾತ್ಮಕ ಸಂಬಂಧದ ಬೆಸುಗೆಯಾಗಿರುವ ಮುದಗಲ್ ಕೋಟೆ ಇಂದು ಪುರಸಭೆಯ ಆಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆಯ ಘೋರ ನಿರ್ಲಕ್ಷ್ಯದಿಂದಾಗಿ ವಿನಾಶದ ಹಾದಿ ಹಿಡಿದಿದೆ. ಮುಂದಿನ ಪೀಳಿಗೆಗೆ ಈ ಇತಿಹಾಸವನ್ನು ಉಳಿಸಬೇಕಾದರೆ, ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಕೋಟೆಯ ಜೀರ್ಣೋದ್ಧಾರ ಹಾಗೂ ಸ್ವಚ್ಛತೆಗೆ ಮುಂದಾಗಬೇಕಿದೆ.

ಎಲ್ಲೆಂದರಲ್ಲಿ ಬಿದ್ದಿರುವ ಸಾರಾಯಿ ಬಾಟಲಿಗಳು, ಸಿಗರೇಟ್ ಪ್ಯಾಕ್‌ಗಳು, ಪ್ಲಾಸ್ಟಿಕ್ ತ್ಯಾಜ್ಯಗಳು, ಎದೆಯುದ್ದ ಬೆಳೆದು ನಿಂತಿರುವ ಮುಳ್ಳಿನ ಗಿಡಗಂಟೆಗಳು, ರಸ್ತೆ ಮೇಲೆಲ್ಲಾ ಗುಟ್ಕಾ ತಿಂದು ಉಗುಳಿರುವ ಕೆಂಪು ರಂಗೋಲಿ ಇದನ್ನು ನೋಡುತ್ತಿದ್ದರೆ ಇದೊಂದು ಭವ್ಯ ಇತಿಹಾಸ ಸಾರುವ ಹೆಮ್ಮೆಯ ಕೋಟೆಯೋ ಅಥವಾ ಯಾರಿಗೂ ಬೇಡವಾದ ಪಾಳುಬಿದ್ದ ಪ್ರದೇಶವೋ ಎನ್ನುವ ಅನುಮಾನ ಕಾಡದಿರದು. ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಮುದಗಲ್ ಪಟ್ಟಣದಲ್ಲಿರುವ ಐತಿಹಾಸಿಕ ಕೋಟೆ ಇಂದು ನಿರ್ವಹಣೆಯಿಲ್ಲದೆ ಸಂಪೂರ್ಣ ಅಳಿವಿನಂಚಿಗೆ ತಲುಪಿದೆ. ಇಂದು ತನ್ನ ಅಳಿವು-ಉಳಿವಿನ ಅಸ್ತಿತ್ವಕ್ಕಾಗಿ ಹೋರಾಡುತ್ತಿದೆ.

ಮುದಗಲ್ ಕೇವಲ ಕೋಟೆಯಲ್ಲ, ಶತಶತಮಾನಗಳ ಕೋಮು ಸೌಹಾರ್ದತೆಯ ಜೀವಂತ ಸಾಕ್ಷಿ. ಇಂದಿಗೂ ಮುದಗಲ್ ಪಟ್ಟಣದಲ್ಲಿ 12ಕ್ಕೂ ಹೆಚ್ಚು ಮಸೀದಿಗಳು, 20ಕ್ಕೂ ಹೆಚ್ಚು ದರ್ಗಾಗಳು, ಬಸವ ಪಟ್ಟಣ ಈದ್ಗಾ ಹಾಗೂ ಹೊಸ ಈದ್ಗಾ ಎಂಬ ಎರಡು ಪ್ರಾರ್ಥನಾ ಮಂದಿರಗಳು, 12ಕ್ಕೂ ಹೆಚ್ಚು ಐತಿಹಾಸಿಕ ಬಾವಿಗಳಿವೆ. ಇಲ್ಲಿನ ನೂರಾರು ವರ್ಷಗಳ ಇತಿಹಾಸವಿರುವ ಮೊಹರಂ ಹಬ್ಬ ಹಿಂದೂ-ಮುಸ್ಲಿಂ ಬಾಂಧವರ ಭಾವನಾತ್ಮಕ ಬೆಸುಗೆಯಾಗಿದೆ. ಮಾನವೀಯ ಮೌಲ್ಯ, ಕೋಮು ಸೌಹಾರ್ದತೆ ಮತ್ತು ಜಾತ್ಯತೀತತೆಗೆ ಹೆಸರಾದ ಇಡೀ ಊರಿನ ಭವ್ಯ ಸಂಸ್ಕೃತಿಯನ್ನು ಈ ತಾಣಗಳು ಜಗತ್ತಿಗೆ ಸಾರುತ್ತವೆ. ಆದರೆ, ಕಲ್ಯಾಣ ಎಂದು ಹೆಸರಿಟ್ಟುಕೊಂಡಿರುವ ಈ ನಾಡಿನಲ್ಲಿ, ಈ ಸ್ಮಾರಕಗಳ ಕಲ್ಯಾಣ ಮಾತ್ರ ಇಂದಿಗೂ ಮರೀಚಿಕೆಯಾಗಿಯೇ ಉಳಿದಿದೆ.

ಮುದಗಲ್ ಕೋಟೆಯ ನಾಮಫಲಕ

''ಸಾವಿರಾರು ವರ್ಷಗಳ ಇತಿಹಾಸವಿರುವ ನಮ್ಮೂರಿನ ಹೆಮ್ಮೆಯ ಕೋಟೆಯನ್ನು ಉಳಿಸಿಕೊಳ್ಳಲು ಸರ್ಕಾರವಾಗಲಿ, ಪುರಸಭೆಯಾಗಲಿ ಯಾವುದೇ ಆಸಕ್ತಿ ತೋರಿಸುತ್ತಿಲ್ಲ. ಕನಿಷ್ಠ ಸ್ವಚ್ಛತೆಯನ್ನೂ ಕಾಪಾಡದೆ ಕೋಟೆಯನ್ನು ಹಾಳುಗೆಡವುತ್ತಿದ್ದಾರೆ. ಕೇವಲ ಕೋಟೆಯಷ್ಟೇ ಅಲ್ಲ, ಇಡೀ ಮುದಗಲ್ ಪಟ್ಟಣದಲ್ಲಿ ರಸ್ತೆಗಳ ಕಾಮಗಾರಿಗಳು ಅಸ್ತವ್ಯಸ್ತಗೊಂಡಿವೆ. ಕುಡಿಯುವ ನೀರಿನ ಸಮಸ್ಯೆಯಂತೂ ಹೇಳತೀರದಾಗಿದೆ'' ಎಂದು ಅಸಮಾಧಾನ ವ್ಯಕ್ತಪಡಿಸುತ್ತಾರೆ ಸಾಮಾಜಿಕ ಕಾರ್ಯಕರ್ತ ವೆಂಕಟೇಶ ಹಿರೆಮನಿ.



ದಲಿತ ಮುಖಂಡ ಬಸವರಾಜ್ ಬಂಕದಮನಿ, ''ಕೋಟೆಯ ಒಳಗೆ ಗಲೀಜು ಮನೆ ಮಾಡಿದ್ದು, ಅಲ್ಲಿ ಕನಿಷ್ಠ 2 ನಿಮಿಷ ನಿಲ್ಲಲೂ ಸಾಧ್ಯವಾಗುತ್ತಿಲ್ಲ. ಕಲಬುರಗಿ ಹಾಗೂ ಬೆಂಗಳೂರಿನಿಂದ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳು ಬಂದು ಭೇಟಿ ನೀಡಿ ಹೋಗಿದ್ದಾರೆ. ಅವರು ಬಂದಾಗಲೆಲ್ಲಾ ನಾವು ಮನವಿ ಪತ್ರಗಳನ್ನು ನೀಡುತ್ತಲೇ ಇದ್ದೇವೆ, ಆದರೂ ಯಾವ ಪ್ರಯೋಜನವೂ ಆಗಿಲ್ಲ. ಗಿಡಗಂಟೆಗಳು ಬೆಳೆದು ಅರಣ್ಯದಂತಾಗಿರುವುದರಿಂದ ಹೆಣ್ಣುಮಕ್ಕಳು ಇತ್ತ ಸುಳಿಯಲೂ ಭಯಪಡುವ ವಾತಾವರಣ ನಿರ್ಮಾಣವಾಗಿದೆ. ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಇನ್ನಾದರೂ ಎಚ್ಚೆತ್ತುಕೊಂಡು ಜವಾಬ್ದಾರಿಯಿಂದ ವರ್ತಿಸಬೇಕು'' ಎಂದು ಆಗ್ರಹಿಸಿದರು.

ಕಲ್ಯಾಣ ಕರ್ನಾಟಕದ ಹೆಮ್ಮೆಯ ರಾಯಚೂರು ಜಿಲ್ಲೆಯ ಮುದಗಲ್ ಪಟ್ಟಣ ಐತಿಹಾಸಿಕವಾಗಿ ಅಪ್ರತಿಮ ಚರಿತ್ರೆಯನ್ನು ಹೊಂದಿದೆ. ಉತ್ತರಕ್ಕೆ ಕೃಷ್ಣಾ ಮತ್ತು ದಕ್ಷಿಣಕ್ಕೆ ತುಂಗಭದ್ರಾ ನದಿಗಳ ನಡುವೆ ಇರುವ ಈ ಸಮೃದ್ಧ ಪ್ರದೇಶವನ್ನು ಬಹಮನಿ ಅರಸರ ಕಾಲದಲ್ಲಿ ದೋಆಬ್ (ಎರಡು ನದಿಗಳ ನಡುವಣ ಪ್ರದೇಶ) ಎಂದು ಕರೆಯಲಾಗುತ್ತಿತ್ತು. ಸುಮಾರು 2000 ವರ್ಷಗಳ ಸುದೀರ್ಘ ಇತಿಹಾಸವಿರುವ ಈ ಪ್ರದೇಶದ ಕೋಟೆ-ಕೊತ್ತಲಗಳು, ಶಾಸನಗಳು, ದೇವಾಲಯ-ಮಸೀದಿಗಳು ಮತ್ತು ಅರಮನೆಯ ಅವಶೇಷಗಳು ಇಲ್ಲಿನ ಶ್ರೀಮಂತ ಸಂಸ್ಕೃತಿಯನ್ನು ಸಾರುತ್ತವೆ.

ಶಾತವಾಹನರು, ಕಲ್ಯಾಣ ಚಾಲುಕ್ಯರು, ಯಾದವರು, ಕುಮ್ಮಟ ನಾಯಕರು, ವಿಜಯನಗರ ಅರಸರು, ಬಹಮನಿ ಮತ್ತು ಆದಿಲ್ ಶಾಹಿಗಳು, ಮೊಘಲರು ಹಾಗೂ ಹೈದರಾಬಾದ್ ನಿಜಾಮರು ಸೇರಿದಂತೆ ಹಲವು ಪ್ರಸಿದ್ಧ ರಾಜವಂಶಗಳು ಈ ಪ್ರಾಚೀನ ನಗರವನ್ನು ಆಳಿವೆ. ಇದರಲ್ಲಿ ವಿಜಯನಗರದ ಅರಸರು ಮತ್ತು ಬಹಮನಿ ಸುಲ್ತಾನರ ಆಡಳಿತಾವಧಿ ಅತ್ಯಂತ ಪ್ರಮುಖ ಘಟ್ಟ.

ಕ್ರಿ.ಶ 1053ರಲ್ಲಿ ದೇವಗಿರಿ ಯಾದವರ ಕಾಲದಲ್ಲಿ ಜಮೀನ್ದಾರ ಮುದ್ದಪ್ಪ ರೆಡ್ಡಿ ಅವರು ಮುದಗಲ್‌ನಲ್ಲಿ ಈ ಎರಡು ಸುತ್ತಿನ ಕೋಟೆಯನ್ನು ನಿರ್ಮಿಸಿದರು. ದೇವಗಿರಿ ಯಾದವರ ವಂಶದ ಭಿಲ್ಲಮನ ಆಡಳಿತದಲ್ಲಿ ಮಹಾಮಂಡಳೇಶ್ವರನಾಗಿದ್ದ ಕದಂಬ ಕುಲದ ಬಿಜ್ಜರಸನು ಮುದಗಲ್ ಅನ್ನು ತನ್ನ ರಾಜಧಾನಿಯನ್ನಾಗಿ ಮಾಡಿಕೊಂಡಿದ್ದನು. ಈ ನಗರವು ಇಂದ್ರನ ಅಮರಾವತಿಗಿಂತಲೂ ಸುಂದರವಾಗಿತ್ತೆಂದು ಕ್ರಿ.ಶ 1215ರ ಶಾಸನವೊಂದು ಉಲ್ಲೇಖಿಸುತ್ತದೆ.

ದೋಆಬ್ ಪ್ರದೇಶದ ಗಡಿಭಾಗದ ಆಯಕಟ್ಟಿನ ಸೂಕ್ಷ್ಮ ಕೇಂದ್ರವಾಗಿದ್ದರಿಂದ, ಈ ಕೋಟೆಯನ್ನು ಯಾರು ಗೆಲ್ಲುತ್ತಾರೋ ಅವರಿಗೆ ಎರಡು ನದಿಗಳ ಮೇಲಿನ ಆರ್ಥಿಕ ಮತ್ತು ವಾಣಿಜ್ಯ ನಿಯಂತ್ರಣ ಸಿಗುತ್ತಿತ್ತು. ಇದೇ ಕಾರಣಕ್ಕಾಗಿ ವಿಜಯನಗರ ಅರಸರು ಹಾಗೂ ಬಹಮನಿ ಸುಲ್ತಾನರ ನಡುವೆ ಬರೋಬ್ಬರಿ 12 ಯುದ್ಧಗಳು ನಡೆದಿವೆ. ಇತಿಹಾಸದ ಪ್ರಕಾರ, ಒಂದು ಯುದ್ಧವಂತೂ ಮುದಗಲ್ ನಗರದ ಒಬ್ಬ ಅಕ್ಕಸಾಲಿಗ ಯುವತಿಯ ಕಾರಣಕ್ಕಾಗಿ ನಡೆದಿತ್ತು ಎಂಬ ಸ್ವಾರಸ್ಯಕರ ಕಥೆಯೂ ಇದೆ. ಕ್ರಿ.ಶ 1566ರ ತಾಳಿಕೋಟೆ ಯುದ್ಧದ ನಂತರ ಈ ಕೋಟೆ ಆದಿಲ್ ಶಾಹಿಗಳ ವಶವಾಯಿತು.

ಬಯಲು ಪ್ರದೇಶ ಮತ್ತು ಬೆಟ್ಟದ ಮೇಲೆಯೂ ವಿಸ್ತರಿಸಿರುವ ಈ ಕೋಟೆಯು 1,919 ಅಡಿ ಉದ್ದ ಹಾಗೂ 24 ಅಡಿ ಎತ್ತರದ ಬಲಿಷ್ಠ ಗೋಡೆಯನ್ನು ಹೊಂದಿದೆ. 40 ಅಡಿ ಎತ್ತರ ಹಾಗೂ 160 ಅಡಿ ಅಗಲವಿರುವ 16 ಭವ್ಯ ಬುರುಜುಗಳು ಇಲ್ಲಿವೆ. ಶತ್ರುಗಳು ಸುಲಭವಾಗಿ ಒಳಬರದಂತೆ ತಡೆಯಲು ಕೋಟೆಯ ಸುತ್ತ ಸುಮಾರು 300 ಅಡಿ ಅಗಲ ಹಾಗೂ 10 ಅಡಿ ಆಳವಿರುವ ಕಂದಕವಿದ್ದು, ಅದರಲ್ಲಿ ಕಡುಗಲಿ ಮೊಸಳೆಗಳನ್ನು ಬಿಡಲಾಗುತ್ತಿತ್ತು ಎನ್ನಲಾಗುತ್ತದೆ. ಇಲ್ಲಿ ಕಾಟೇ ದರವಾಜ ಮತ್ತು ಫತೇ ದರವಾಜ ಎಂಬ ಎರಡು ಬೃಹತ್ ದ್ವಾರಗಳಿವೆ. ಶತ್ರುಗಳನ್ನು ಗೊಂದಲಕ್ಕೀಡುಮಾಡಲು ಬುರುಜುಗಳನ್ನು ದಾಟಿದ ನಂತರವೇ ಕಾಣುವಂತೆ ಪ್ರವೇಶ ದ್ವಾರವನ್ನು ವಿಶಿಷ್ಟವಾಗಿ ನಿರ್ಮಿಸಲಾಗಿದೆ; ಹೀಗಾಗಿ ದೂರದಿಂದ ನೋಡಿದರೆ ಇಲ್ಲಿನ ಬಾಗಿಲು ಕಣ್ಣಿಗೆ ಬೀಳುವುದಿಲ್ಲ.

ಇಂತಹ ಭವ್ಯವಾದ ಇತಿಹಾಸ ಮತ್ತು ಸಾಂಸ್ಕೃತಿಕ ಪರಂಪರೆಯ ಅಚ್ಚಳಿಯದ ಕುರುಹಾಗಿ ಇಂದಿಗೂ ನಿಂತಿದೆ ಈ ಮುದಗಲ್ ಕೋಟೆ. ಈ ವೈಭವೋಪೇತ ಇತಿಹಾಸವನ್ನು ಹೊಂದಿರುವ, ಹಿಂದೂ-ಮುಸ್ಲಿಮರ ಭಾವನಾತ್ಮಕ ಸಂಬಂಧದ ಬೆಸುಗೆಯಾಗಿರುವ ಮುದಗಲ್ ಕೋಟೆ ಇಂದು ಪುರಸಭೆಯ ಆಡಳಿತ ಹಾಗೂ ಪ್ರವಾಸೋದ್ಯಮ ಇಲಾಖೆಯ ಘೋರ ನಿರ್ಲಕ್ಷ್ಯದಿಂದಾಗಿ ವಿನಾಶದ ಹಾದಿ ಹಿಡಿದಿದೆ. ಮುಂದಿನ ಪೀಳಿಗೆಗೆ ಈ ಇತಿಹಾಸವನ್ನು ಉಳಿಸಬೇಕಾದರೆ, ಸರ್ಕಾರ ತಕ್ಷಣವೇ ಎಚ್ಚೆತ್ತುಕೊಂಡು ಕೋಟೆಯ ಜೀರ್ಣೋದ್ಧಾರ ಹಾಗೂ ಸ್ವಚ್ಛತೆಗೆ ಮುಂದಾಗಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR